ಸಂಪುಟ : 10 ಸಂಚಿಕೆ: 256 ಪುಟ : 4+2 ಬೆಲೆ: 3.00 ರವಿವಾರ ನವೆಂಬರ್ 23 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 256 Pages : 4+2 Price : 3.00 Sunday November 23 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಲು ಆಗ್ರಹ । ಮೈಮೇಲೆ ಡಿಸೇಲ್ ಸುರಿದುಕೊಂಡು ಕಾಂಗ್ರೆಸ್ ಕಾರ್ಯಕರ್ತರ ಆಕ್ರೋಶ

# ಶಾಸಕ ಜಿ.ಎಸ್. ಪಾಟೀಲರ ಕಡೆಗಣನೆಗೆ ಆಕ್ರೋಶ



ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕು ಎಂದು ನಡೆಯುತ್ತಿದ್ದ ಹಕ್ಕೊತ್ತಾಯದ ವೇಳೆ ತಾಲೂಕಿನ ಮಾರನಬಸರಿ ಗ್ರಾಮದ ಕಾಂಗ್ರೆಸ್ ಕಾರ್ಯಕರ್ತ ರವಿ ಗಡಾದ ಹಾಗೂ ದಿಂಡೂರ ಗ್ರಾಮದ ಕಾಂಗ್ರೆಸ್ ಕಾರ್ಯಕರ್ತ ಸಂಗಪ್ಪ ತೇಜಿ ಮೈಮೇಲೆ ಡಿಸೇಲ್ ಸುರಿದುಕೊಂಡಾಗ ಸ್ಥಳದಲ್ಲಿದ್ದ ಪೊಲೀಸರು ಹಾಗೂ ಕೆಲ ಕಾಂಗ್ರೆಸ್ ಕಾರ್ಯಕರ್ತರು ತಡೆದರು. ಕೆಲ ಕಾರ್ಯಕರ್ತರು ಅರೆಬೆತ್ತಲೆ ಪ್ರತಿಭಟನೆ ನಡೆಸಿ ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.



**■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಕಾಂಗ್ರೆಸ್ ಹೈಕಮಾಂಡ್ ರೋಣ ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡದೇ ಹೋದಲ್ಲಿ ಸಾಮೂಹಿಕವಾಗಿ ನೀಡಿರುವ ರಾಜೀನಾಮೆ ಪತ್ರಗಳನ್ನು ಅಂಗಿಕರಿಸಬೇಕು ಎಂದು ರೋಣ ಹಾಗೂ ನರೇಗಲ್ ಬ್ಲಾಕ್ ಕಾಂಗ್ರೆಸ್ ಘಟಕಗಳ ಮುಂಚೂಣಿ ಪದಾಧಿಕಾರಿಗಳು ಸ್ಥಳೀಯ ಕೆಕೆ ವೃತ್ತದಲ್ಲಿ ಶನಿವಾರ ಹಕ್ಕೊತ್ತಾಯ ಮಂಡಿಸಿದರು.


ಕಾಂಗ್ರೆಸ್ ಸರ್ಕಾರದ ಯೋಜನೆಗಳನ್ನು ಮತಕ್ಷೇತ್ರದಲ್ಲಿ ಸಮರ್ಪಕವಾಗಿ ಜಾರಿಗೊಳಿಸುವ ಮೂಲಕ ಸರ್ಕಾರದ ಆಶಯಗಳನ್ನು ಈಡೇರಿಸಿದ ಹಾಗೂ ಗದಗ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷ ಸಂಘಟನೆಯಲ್ಲಿ ಹಗಲಿರುಳು ಶ್ರಮಿಸಿದ ಶಾಸಕ ಜಿ.ಎಸ್. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಬೇಕು ಎನ್ನುವುದು ಕಾಂಗ್ರೆಸ್ ಕಾರ್ಯಕರ್ತರ ಹಾಗೂ ಅಭಿಮಾನಿಗಳ ಒತ್ತಾಯವಾಗಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ರಚನೆಗೆ ರೋಣ ಮತಕ್ಷೇತ್ರದದಿಂದ ಶಾಸಕ ಜಿ.ಎಸ್. ಪಾಟೀಲರನ್ನು 5 ಬಾರಿ ಪ್ರಚಂಡ ಬಹುಮತದಿಂದ ವಿಧಾನಸಭೆಗೆ ಕಳುಹಿಸಿದ್ದಾರೆ. ಆದರೆ ಕಾಂಗ್ರೆಸ್ ಹೈಕಮಾಂಡ್ ಸಚಿವ ಸ್ಥಾನ ನೀಡುವಾಗ ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲರನ್ನು ಕಡೆಗಣಿಸಿದೆ. ರೋಣ ಮತಕ್ಷೇತ್ರದ ಮತದಾರರ ಬೇಡಿಕೆಯನ್ನು ನಿರ್ಲಕ್ಷಿಸುವ ಯತ್ನ ಇದಾಗಿದೆ ಎಂದು ಕಾಂಗ್ರೆಸ್ ಘಟಕದ ಮಹಿಳಾ ಪದಾಧಿಕಾರಿಗಳು ಆರೋಪಿಸಿದರು.

ಕಾಂಗ್ರೆಸ್ ಪಕ್ಷದ ಹಿರಿಯ ಶಾಸಕರಾಗಿರುವ ಜಿ.ಎಸ್. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಮನವಿ ಮಾಡಿದ ಸಂದರ್ಭದಲ್ಲಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಆದರೆ ಪ್ರಸ್ತುತ ಘಟನೆಗಳನ್ನು ಗಮನಿಸಿದರೆ ಅಂತಹ ಆಶಾದಾಯಕ ಬೆಳವಣಿಗೆ ಕಾಣದ ಹಿನ್ನೆಲೆಯಲ್ಲಿ ಅನಿವಾರ್ಯವಾಗಿ ಹಕ್ಕೊತ್ತಾಯ ಮಾಡುತ್ತಿದ್ದೇವೆ. ಹೀಗಾಗಿ ಈ ಬಾರಿ ಸಚಿವ ಸಂಪುಟದಲ್ಲಿ ಶಾಸಕ ಜಿ.ಎಸ್. ಪಾಟೀಲರಿಗೆ ಕಾಂಗ್ರೆಸ್ ಹೈಕಮಾಂಡ್ ಸಚಿವ ಸ್ಥಾನ ನೀಡಬೇಕು. ಇಲ್ಲದಿದ್ದರೆ ರೋಣ, ನರೇಗಲ್ ಬ್ಲಾಕ್ ಕಾಂಗ್ರೆಸ್ ಮೂಂಚೂಣಿ ಘಟಕದ ಪದಾಧಿಕಾರಿಗಳು ನೀಡಿರುವ ಸಾಮೂಹಿಕ ರಾಜೀನಾಮೆ ಪತ್ರಗಳನ್ನು ಅಂಗೀಕರಿಸಬೇಕು. ಮುಂದಿನ ದಿನಗಳಲ್ಲಿ ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕು ಎಂದು ನಡೆಸುತ್ತಿರುವ ಹೋರಾಟವನ್ನು ರಾಷ್ಟ್ರ ರಾಜಧಾನಿ ದಿಲ್ಲಿಯವರೆಗೆ ಹಬ್ಬಿಸುತ್ತೇವೆ ಎಂದು ಎಚ್ಚರಿಸಿದರು.

ಈ ವೇಳೆ ರೋಣ, ನರೇಗಲ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಮುಂಚೂಣಿ ಘಟಕದ ಪದಾಧಿಕಾರಿಗಳು ಹಾಗೂ ಕಾಂಗ್ರೆಸ್ ಮುಖಂಡರು ನೈತಿಕ ಬೆಂಬಲ ಸೂಚಿಸಿ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಸಮಗ್ರ ರೈತ ಸಂಘಟನೆಗಳ ಒಕ್ಕೂಟ ನಡೆಸುತ್ತಿರುವ ಪ್ರತಿಭಟನಾ ಸ್ಥಳದಲ್ಲಿ ಸಂಸದ ಬಸವರಾಜ ಬೊಮ್ಮಾಯಿ

# ಇಬ್ಬರ ನಡುವೆ ಕೂಸು ಬಡವಾಗದಿರಲಿ



ರೈತನ ಬದುಕು ಅನಿಶ್ಚಿತತೆಯಿಂದ ಕೂಡಿದೆ. ರೈತನ ಬದುಕು ಬಯಲ ಬದುಕು. ಒಳ್ಳೆ ಮಳೆಯ ನಿರೀಕ್ಷೆಯಲ್ಲಿ ಬಿತ್ತನೆ ಮಾಡುವುದು, ಮಳೆ ಬಂದರೆ ಬೆಳೆ, ಬೆಳೆ ಬಂದರೆ ಬೆಲೆ ಸಿಗದು. ಈ ಹಿನ್ನೆಲೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರ ಒಂದೇ ನೀತಿ ಇಟ್ಟುಕೊಂಡು ಕೆಲಸ ಮಾಡಿದರೆ ರೈತರಿಗೆ ಅನುಕೂಲವಾಗುತ್ತದೆ. ಬೆಂಬಲ ಬೆಲೆ ಯೋಜನೆಯ ಪರಿಣಾಮ ರೈತರಿಗೂ ಅನುಕೂಲವಾಗುತ್ತದೆ. ಖರೀದಿ ಮಾಡಿದ ಸರ್ಕಾರಕ್ಕೂ ನಷ್ಟವಾಗುವುದಿಲ್ಲ. ಕೇಂದ್ರ-ರಾಜ್ಯ ಸರ್ಕಾರ ಸಂಘರ್ಷ ಮಾಡಿದರೆ ಇಬ್ಬರ ನಡುವೆ ಕೂಸು ಬಡವಾದಂತೆ ಆಗುತ್ತದೆ. ರೈತ ಯಾವುದೇ ಪಕ್ಷಕ್ಕೆ ಸೇರಿಲ್ಲ. ಎಲ್ಲ ಪಕ್ಷಗಳು ರೈತನಿಗೆ ಸೇರಿವೆ ಎಂದು ಸಂಸದ ಬೊಮ್ಮಾಯಿ ಹೇಳಿದರು.

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಾಜ್ಯ ಸರ್ಕಾರ ಕೇವಲ 10 ಲಕ್ಷ ಮೆಟ್ರಿಕ್ ಟನ್ ಮೆಕ್ಕೆ ಜೋಳ ಖರೀದಿಸುವ ಭರವಸೆ ನೀಡಿ, ಕೇಂದ್ರ ಸರ್ಕಾರದ ಕಡೆಗೆ ಕೈ ತೋರಿಸುವ ಬದಲು, ರಾಜ್ಯ ಸರ್ಕಾರದ ಆವರ್ತ ನಿಧಿಯಿಂದ ಖರೀದಿ ಮಾಡಲು ಅವಕಾಶ ಇದೆ. ಸುಮಾರು 200-300 ಕೋಟಿ ರೂ ಖರ್ಚು ಮಾಡಿ ಮೆಕ್ಕೆಜೋಳ ಖರೀದಿಸಿ ರೈತರ ರಕ್ಷಣೆ ಮಾಡಬೇಕೆಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದರು.

ಶನಿವಾರ ಲಕ್ಷ್ಮೇಶ್ವರ ಪಟ್ಟಣದ ಶಿಗ್ಲಿ ಕ್ರಾಸ್‌ನಲ್ಲಿ ಸಮಗ್ರ ರೈತ ಸಂಘಟನೆಗಳ ಒಕ್ಕೂಟದ ವತಿಯಿಂದ ಲಕ್ಷ್ಮೇಶ್ವರ, ಶಿರಹಟ್ಟಿ ಹಾಗೂ ಮುಂಡರಗಿ ತಾಲೂಕಿನ ರೈತರು ನಡೆಸುತ್ತಿರುವ ಪ್ರತಿಭಟನಾ ನಿರತ ರೈತರ ಸ್ಥಳಕ್ಕೆ ಭೇಟಿ ನೀಡಿ, ರೈತರನ್ನು ಉದ್ದೇಶಿಸಿ ಅವರು ಮಾತನಾಡಿದರು.

ಕಳೆದ ವರ್ಷ 15 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ 54 ಲಕ್ಷ ಟನ್ ಮೆಕ್ಕೆಜೋಳ ಬೆಳೆಯಲಾಗಿತ್ತು. ಈ ವರ್ಷ 17 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆದರೂ 54 ಲಕ್ಷ ಮೆಟ್ರಿಕ್ ಟನ್ ಬೆಳೆ ಬಂದಿದೆ. ಇಂತಹ ಸಂದರ್ಭದಲ್ಲಿ ಕೇವಲ 10 ಲಕ್ಷ ಟನ್ ಖರೀದಿಸುವ ಹೇಳಿಕೆ ಬಿಟ್ಟು, ಹೆಚ್ಚಿಗೆ ಖರೀದಿಸಲು ಮುಂದಾಗಬೇಕು. ಲಕ್ಷ್ಮೇಶ್ವರದಲ್ಲಿ ಗೋವಿನಜೋಳ ಖರೀದಿ ಕೇಂದ್ರಕ್ಕಾಗಿ ರೈತರು ಮಾಡಿದ ಹೋರಾಟ ಸರಕಾರದ ಕಣ್ಣು ತೆರೆಯುವಂತೆ ಮಾಡಿದ್ದು, ಅದಕ್ಕಾಗಿ ರೈತರ ಮೇಲೆ ಕೇಂದ್ರ ಮತ್ತು ರಾಜ್ಯ ಸರಕಾರಗಳು ಸಮಾನವಾಗಿ ಗಮನ ಹರಿಸಬೇಕು ಎಂದರು.

ಈ ವೇಳೆ ಮಂಜುನಾಥ ಮಾಗಡಿ, ನಾಗರಾಜ ಚಿಂಚಲಿ, ಬಸವರಾಜ ಬೆಂಡಿಗೇರಿ, ಪೂರ್ಣಾಜಿ ಖರಾಟೆ, ಮಹೇಶ ಹೊಗೆಸೊಪ್ಪಿನ್, ಎಂ.ಎಸ್. ದೊಡ್ಡಗೌಡ್ರ ಸೇರಿದಂತೆ ನೂರಾರು ರೈತರು ಹಾಜರಿದ್ದರು.

# ರೈತರ ಹೋರಾಟಕ್ಕೆ ಸಂಪೂರ್ಣ ಬೆಂಬಲ




**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬಂಗಾರಕ್ಕೆ ಇದೀಗ ಹೆಚ್ಚಿನ ಬೆಲೆಯಿದೆ. ಆದರೆ, ಜನರು ತಿನ್ನವ ಅನ್ನಕ್ಕೆ ಬಂಗಾರಕ್ಕಿಂತಲೂ ಅಧಿಕ ಬೆಲೆ ಇದೆ. ಅನ್ನವಿಲ್ಲದೆ ಯಾರೂ ಬದುಕಲಾಗದು. ಅನ್ನ ಕೊಡುವ ರೈತ ಬೆಳೆದ ಬೆಳೆಗೆ ಬೆಲೆ ಇಲ್ಲದಂತಹ ಪರಿಸ್ಥಿತಿ ಬಂದಿರುವದು ದುರದೃಷ್ಟಕರ. ಜಗತ್ತಿಗೆ ಅನ್ನ ನೀಡುವ ಪವಿತ್ರ ಕಾರ್ಯ ಮಾಡುವ ರೈತನಿಗೆ ಹೀನಾಯ ಸ್ಥಿತಿ ಬಂದಿರುವದು ಖೇದಕರ ಸಂಗತಿ ಎಂದು ಶಿರಹಟ್ಟಿ ಫಕ್ಕೀರೇಶ್ವರ ಸಂಸ್ಥಾನ ಮಠದ ಜಗದ್ಗುರು ಫಕೀರ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.

ಅವರು ಪಟ್ಟಣದಲ್ಲಿ ಸಮಗ್ರ ರೈತಪರ ಸಂಘಟನೆಗಳು ಸೇರಿದಂತೆ ಅನೇಕ ಸಂಘಟನೆಗಳ ಸಹಯೋಗದಲ್ಲಿ 8ನೇ ದಿನದ ಅಹೋರಾತ್ರಿ ಹೋರಾಟ ವೇದಿಕೆಗೆ ಆಗಮಿಸಿ ಮಾತನಾಡಿದರು.

ಬೆಳೆ ಚೆನ್ನಾಗಿ ಬಂದಾಗ ಬೆಲೆ ಇಲ್ಲ, ಬೆಳೆ ಇಲ್ಲದೆ ಇದ್ದಾಗ ಅದಕ್ಕೆ ಬೆಲೆ ಇರುತ್ತದೆ. ಅನ್ನವನ್ನು ನಿರ್ಮಾಣ ಮಾಡುವ ಶಕ್ತಿ ರೈತನಿಗೆ ಇದೆ. ಇಂತಹ ರೈತರ ಹೋರಾಟಕ್ಕೆ ನಮ್ಮ ಸಂಪೂರ್ಣ ಬೆಂಬಲವಿದೆ. ಸರಕಾರ ಖರೀದಿ ಕೇಂದ್ರ ಪ್ರಾರಂಭಿಸುವದಾಗಿ ಹೇಳಿರುವದು ಸ್ತುತ್ಯಾರ್ಹ. ಆದಷ್ಟು ಶೀಘ್ರ ಆ ಕೆಲಸವಾಗಲಿ ಎಂದು ನುಡಿದರು.

ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶ

# ಡಿ. 13ರಂದು ರಾಷ್ಟ್ರೀಯ ಲೋಕ ಅದಾಲತ್

**■ ವಿಜಯಸಾಕ್ಷಿ ಸುದ್ದಿ, ಗದಗ**

ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಆದೇಶದನ್ವಯ ಗದಗ ಜಿಲ್ಲೆಯಲ್ಲಿ ಡಿ. 13ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಂಡಿದ್ದು, ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ತಮ್ಮ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ.

ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು, ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ತಮ್ಮ ವ್ಯಾಜ್ಯಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರಾದ ನಾಗವೇಣಿ ತಿಳಿಸಿದ್ದಾರೆ.



ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ ಅವರ ಮನ ಒಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು. ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು, ಇಲಾಖೆಗಳವರು ಡಿ. 13ರಂದು ಜರುಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನ ಮೂಲಕ ಪರಿಹರಿಸಿಕೊಳ್ಳಬಹುದು.

ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಸಿವಿಲ್ ದಾವೆಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಎಮ್.ಎಮ್.ಆರ್.ಡಿ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ▶▶ 3ನೇ ಪುಟಕ್ಕೆ

ಹಜರತ್ ಸೈಯದ್ ಶಾವಲಿ ದರ್ಗಾದ ನವೀಕೃತ ಕಟ್ಟಡ, ನೂತನ ನೆಮ್ಮದಿ ಭವನ ಉದ್ಘಾಟನೆ

# ದರ್ಗಾ ಶಾಂತಿ, ಮಾನವೀಯ ಮೌಲ್ಯಗಳ ಕೇಂದ್ರ

**■ ವಿಜಯಸಾಕ್ಷಿ ಸುದ್ದಿ, ಗದಗ**

ದರ್ಗಾ ಎಂದರೆ ಕೇವಲ ಧಾರ್ಮಿಕ ಬಂಧನವಲ್ಲ. ಇದು ಶಾಂತಿ, ಪ್ರೀತಿ, ಸಹಿಷ್ಣುತೆ, ಸಾಮರಸ್ಯ ಹಾಗೂ ಮಾನವೀಯತೆ ಹರಡುವ ಪವಿತ್ರ ತಾಣ. ಇಲ್ಲಿ ಬರುವ ಪ್ರತಿಯೊಬ್ಬರೂ ತಮ್ಮ ಮನದ ಭಾರವನ್ನು ಇಳಿಸಿ ನೆಮ್ಮದಿ ಮತ್ತು ಆಶೀರ್ವಾದವನ್ನು ಪಡೆದು ಹಿಂತಿರುಗುತ್ತಾರೆ ಎಂದು ಗುಲಬರ್ಗಾದ ಸಜ್ಜಾದೇ ನಶಿನ್ ಖ್ವಾಜಾ ಬಂದೇ ನವಾಜ್ ಗೇಸುದರಾಜ್ ದರ್ಗಾದ ಹಜರತ್ ಸೈಯದ್ ಮೊಹಮ್ಮದ್ ಅಲಿ ಅಲ್‌ಹುಸೇನಿ ಹೇಳಿದರು.

ನಗರದ ಕಾಗದಗಾರ ಓಣಿಯಲ್ಲಿ ಹಜರತ್ ಸೈಯದ್ ಶಾವಲಿ ದರ್ಗಾದ ನವೀಕೃತ ಕಟ್ಟಡ ಹಾಗೂ ನೂತನ ನೆಮ್ಮದಿ ಭವನ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಇಂದು ಉದ್ಘಾಟನೆ ಯಾಗುತ್ತಿರುವ ನೆಮ್ಮದಿ ಕೇಂದ್ರ ನಮ್ಮ ಸಮುದಾಯದ ಕಲ್ಯಾಣಕ್ಕೆ ಮತ್ತೊಂದು ಮಹತ್ವದ ಹೆಜ್ಜೆ. ಆರೋಗ್ಯ ತಪಾಸಣೆ, ಮಾರ್ಗದರ್ಶನ, ಸೇವಾ ಕೇಂದ್ರ ಮತ್ತು ಸಾರ್ವಜನಿಕ ನೆರವಿನ ವಿವಿಧ ವಿಭಾಗಗಳ ಮೂಲಕ ಜನರ ಅಗತ್ಯಗಳನ್ನು ಪೂರೈಸುವ ವ್ಯವಸ್ಥೆಯನ್ನು ಇಲ್ಲಿ ಒದಗಿಸಲಾಗಿರುವುದು ಸಂತಸ ತಂದಿದೆ. ನಗರಸಭೆಯ 17ನೇ ವಾರ್ಡ್‌ನ ನಗರಸಭೆ ಸದಸ್ಯರಾದ ಆಸ್ಮಾ ಮುನ್ನಾಸಾಬ ರೇಶ್ಮಿ ಹಾಗೂ ಕಾಂಗ್ರೆಸ್ ಯುವ ಮುಖಂಡ ಮುನ್ನಾಸಾಬ ಅ.ರೇಶ್ಮಿ, ಮೊಹ್ಮದಲಿ ಕಾಗದಗಾರ ಜಂದಿಸಾಬ ಕಾಗದಗಾರ, ಹಾಮಿದುಲ್ಲಾ ಶಿರಹಟ್ಟಿ, ಮಹ್ಮದಲಿ ದೊಡ್ಡಮನಿ, ಮೆಹಬೂಬ ಕಾಗದಗಾರ, ಮಹ್ಮದರಫೀಕ ಡಾಲಾಯತ ಸೇರಿದಂತೆ ಕಾಗದಗೇರಿ ಓಣಿಯ ಸಮಸ್ತ ಗುರು-ಹಿರಿಯರು ಕೈಗೊಂಡ ಒಳ್ಳೆಯ ಕಾರ್ಯ ಸಮಾಜೋ ಪಯೋಗಿಯಾಗಿದೆ ಎಂದು ಹಜರತ್ ಸೈಯದ್ ಮೊಹಮ್ಮದ್ ಅಲಿ ಅಲ್ ಹುಸೇನಿ ಹೇಳಿದರು.



ಕಟ್ಟಡ ಹಾಗೂ ನೂತನ ನೆಮ್ಮದಿ ಭವನ ಉದ್ಘಾಟನೆ ನೆರವೇರಿಸಿದ ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ಮಾತನಾಡಿ, ನಮ್ಮ ಗದಗ ಶತಮಾನಗಳಿಂದ ಸಾಮಾಜಿಕ ಸಾಮರಸ್ಯ ಮತ್ತು ಭಕ್ತಿ-ಭಾವಗಳ ಸಂಕೇತವಾಗಿದ್ದು, ಈ ಹೊಸ ಕೇಂದ್ರ ಅದರ ಸೇವಾ ಪರಂಪರೆಯನ್ನು ಮತ್ತಷ್ಟು ಶ್ರೀಮಂತಗೊಳಿಸಲಿದೆ ಎಂದರು.

ಸರಕಾರದ ಮುಖ್ಯ ಸಚೇತಕ ಹಾಗೂ ವಿಧಾನಪರಿಷತ್ ಸದಸ್ಯ ಸಲೀಂ ಅಹಮದ್ ಮಾತನಾಡಿ, ದರ್ಗಾದ ಸೇವಾದಾರರು, ಸಂಘಟಕರು, ಸ್ಥಳೀಯರು ನೀಡಿರುವ ಸಹಕಾರ ಹೆಮ್ಮೆ ಮೂಡಿಸಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಆಜಾದ್ ಕೋ-ಆಪರೇಟೀವ್ ಬ್ಯಾಂಕ್ ಚೇರಮನ್ ಸರಫರಾಜ್ ಎಸ್.ಉಮಚಗಿ ಮಾತನಾಡಿ, ದರ್ಗಾದ ಸೇವಾ ಪರಂಪರೆಯಲ್ಲಿ ಶಿಕ್ಷಣದ ಉತ್ತೇಜನವು ಸದಾ ಮುಖ್ಯವಾಗಿರಬೇಕು. ಭವಿಷ್ಯದಲ್ಲಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ, ವಿದ್ಯಾರ್ಥಿ ವೇತನ, ಕೌಶಲ್ಯಾಭಿವೃದ್ಧಿ ಮತ್ತು ಸಮಾಜಮುಖಿ ಶಿಕ್ಷಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಯೋಜನೆ ರೂಪಿಸುತ್ತಿದ್ದೇವೆ ಎಂದರು.

ಕಾಂಗ್ರೆಸ್ ▶▶ 3ನೇ ಪುಟಕ್ಕೆ

## ಶಾಸಕ ಬಂದಾಗ ಎದ್ದು ನಿಲ್ಲದ ವೈದ್ಯನ ವಿರುದ್ಧ ಕ್ರಮ : ಸರ್ಕಾರಕ್ಕೆ ಛೀಮಾರಿ ಹಾಕಿದ ಕೋರ್ಟ್, 50 ಸಾವಿರ ದಂಡ



■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಆಸ್ಪತ್ರೆಯ ತುರ್ತು ವಾರ್ಡ್‌ಗೆ ಶಾಸಕ ಬಂದಾಗ ಎದ್ದು ನಿಂತಿಲ್ಲ ಎಂಬ ಕಾರಣಕ್ಕೆ ಕೋವಿಡ್ ಕರ್ತವ್ಯದಲ್ಲಿದ್ದ ವೈದ್ಯನ ವಿರುದ್ದ ಕ್ರಮ ಕೈಗೊಂಡಿರುವ ಹರಿಯಾಣ ಸರ್ಕಾರವನ್ನು ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್ ಶುಕ್ರವಾರ (ನವೆಂಬರ್ 21) ತೀವ್ರ ತರಾ–ಟೆಗೆ ತೆಗೆದುಕೊಂಡಿದೆ. ಸರ್ಕಾರದ ವರ್ತನೆ ಸಂವೇದನಾರಹಿತ ಮತ್ತು ಅತ್ಯಂತ ಕಳವಳಕಾರಿ ಎಂದು ಟೀಕಿಸಿದೆ.

ವೈದ್ಯಕೀಯ ವೃತ್ತಿಗೆ ತಮ್ಮನ್ನು ಸಮರ್ಪಿಸಿಕೊಂಡಿರುವ ವೈದ್ಯರನ್ನು ದುರ್ಬಳಕೆ ಮಾಡುವಂತಹ ಅನಗತ್ಯ ಮತ್ತು ಅಹಿತಕರ ಕೃತ್ಯಗಳು ನಡೆಯಬಾರದು, ಅವುಗಳನ್ನು ತಡೆಯಬೇಕು ಎಂದು ನ್ಯಾಯಮೂರ್ತಿಗಳಾದ ಅಶ್ವನಿ ಕುಮಾರ್ ಮಿಶ್ರಾ ಮತ್ತು ರೋಹಿತ್ ಕಪೂರ್ ಅವರಿದ್ದ ದ್ವಿಸದಸ್ಯ ಪೀಠ ಹೇಳಿದೆ.

ಅರ್ಜಿದಾರ ವೈದ್ಯನ ಸ್ನಾತಕೋತ್ತರ ವೈದ್ಯಕೀಯ ಕೋರ್ಸ್‌ಗೆ ಅಗತ್ಯವಿರುವ ನಿರಾಕ್ಷೇಪಣಾ ಪ್ರಮಾಣಪತ್ರ (ಎನ್‌ಒಸಿ) ನೀಡುವಂತೆ ಹರಿಯಾಣ ಸರ್ಕಾರಕ್ಕೆ ನಿರ್ದೇಶನ ನೀಡಿದೆ. ಸರ್ಕಾರಕ್ಕೆ 50 ಸಾವಿರ ರೂಪಾಯಿ ದಂಡ ವಿಧಿಸಿದೆ.

ಅರ್ಜಿದಾರರಾದ ಡಾ. ಮನೋಜ್ ಅವರು ಹರಿಯಾಣ ಸರ್ಕಾರದ ಅಧೀನದಲ್ಲಿ ಕೆಲಸ ಮಾಡುತ್ತಿದ್ದ ಅಪಘಾತ ವೈದ್ಯಕೀಯ ಅಧಿಕಾರಿಯಾಗಿದ್ದರು. ಕೋವಿಡ್–19 ಸಾಂಕ್ರಾಮಿಕ ರೋಗದ ಸಮಯದಲ್ಲಿ, ಅವರು ಸರ್ಕಾರಿ ಆಸ್ಪತ್ರೆಯ ತುರ್ತು ಚಿಕಿತ್ಸಾ ವಿಭಾಗದಲ್ಲಿ ಕರ್ತವ್ಯದಲ್ಲಿದ್ದರು. ಆಸ್ಪತ್ರೆಗೆ ಶಾಸಕರೊಬ್ಬರು ಭೇಟಿ ನೀಡಿದಾಗ ಡಾ. ಮನೋಜ್ ಅವರು ಎದ್ದು ನಿಂತಿಲ್ಲ ಎಂಬ ಕಾರಣಕ್ಕೆ ಶಾಸಕ ಸಿಟ್ಟಾಗಿದ್ದರು.

ಇದಾದ ಬಳಿಕ, ಹರಿಯಾಣ ನಾಗರಿಕ ಸೇವೆಗಳ (ಶಿಕ್ಷೆ ಮತ್ತು ಮೇಲ್ಮನವಿ) ನಿಯಮಗಳು, 2016ರ ನಿಯಮ 8ರ ಅಡಿಯಲ್ಲಿ ಡಾ. ಮನೋಜ್ ಅವರಿಗೆ ಸರ್ಕಾರ ಕಾರಣ ಕೇಳಿ (ಶೋ–ಕಾಸ್) ನೋಟಿಸ್ ಜಾರಿ ಮಾಡಿತ್ತು.

ಅದಕ್ಕೆ ಮನೋಜ್ ಅವರು ಜೂನ್ 2024ರಲ್ಲಿ ಉತ್ತರಿಸಿದ್ದರು. "ನನಗೆ ಬಂದಿದ್ದು ಶಾಸಕ ಎಂದು ಗೊತ್ತಿರಲಿಲ್ಲ. ಹಾಗಾಗಿ ಎದ್ದು ನಿಂತಿರಲಿಲ್ಲ, ಉದ್ದೇಶಪೂರ್ವಕವಾಗಿ ಅಗೌರವ ತೋರಿಲ್ಲ. ಹಾಗಾಗಿ, ಅದು ಅಗೌರವಕ್ಕೆ ಸಮನಾಗುವುದಿಲ್ಲ" ಎಂದು ಮನೋಜ್ ಹೇಳಿದ್ದರು.

ಆ ಬಳಿಕ ಸರ್ಕಾರ ಯಾವುದೇ ಆದೇಶ ಹೊರಡಿಸಿರಲಿಲ್ಲ. ಆದರೆ, ಶೋಕಾಸ್ ನೋಟಿಸ್ ಪ್ರಕ್ರಿಯೆ ಬಾಕಿ ಉಳಿಸಿಕೊಂಡಿತ್ತು. ಇದನ್ನೇ ನೆಪವಾಗಿಟ್ಟುಕೊಂಡು ಮನೋಜ್ ಅವರ ಉನ್ನತ ಶಿಕ್ಷಣಕ್ಕೆ ಎನ್‌ಒಸಿ ನೀಡಿರಲಿಲ್ಲ ಎನ್ನಲಾಗಿದೆ.

ಕೋವಿಡ್–19 ಸಮಯದಲ್ಲಿ ತುರ್ತು ಕರ್ತವ್ಯದಲ್ಲಿದ್ದ ಸರ್ಕಾರಿ ವೈದ್ಯರೊಬ್ಬರು, ಶಾಸಕರು ಬಂದಾಗ ಎದ್ದು ನಿಲ್ಲಲಿಲ್ಲ ಎಂಬ ಏಕೈಕ ಕಾರಣಕ್ಕೆ ಅವರಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಿದ ರಾಜ್ಯ ಸರ್ಕಾರದ ಕ್ರಮವನ್ನು ನೋಡಿ ನಮಗೆ ತೀವ್ರ ನೋವು ಮತ್ತು ಆಘಾತವಾಗಿದೆ ಎಂದು ನ್ಯಾಯಾಲಯ ಹೇಳಿದೆ.

### ತಾಲೂಕಾ ಶ.ಸಾ.ಪ, ಕದಳಿ ಮಹಿಳಾ ವೇದಿಕೆ ವತಿಯಿಂದ ದತ್ತಿ ಉಪನ್ಯಾಸ ಕಾರ್ಯಕ್ರಮ

# ಶರಣ ಸಂದೇಶ ಪಾಲನೆಯಿಂದ ಜೀವನ ಪಾವನ

■ ವಿಜಯಸಾಕ್ಷಿ ಸುದ್ದಿ, ಗದಗ

ಶರಣರ ಜೀವನವು ಒಂದು ದಿವ್ಯ ಸಂದೇಶ ಸಾರುವ ಜ್ಞಾನ ದೀವಿಗೆಯಾಗಿದೆ. ಅದನ್ನು ಸದಾ ಕಾಲ ಬೆಳಗಿಸಿ ನಮ್ಮ ಜೀವನದ ಕತ್ತಲೆಯನ್ನು ಹೊಡೆದೋಡಿಸಿ, ಶರಣರ ತತ್ವ ಮತ್ತು ಚಿಂತನೆಗಳ ಪ್ರಕಾರ ಜೀವನ ನಡೆಸುವುದರೊಂದಿಗೆ ಸಮಾಜಕ್ಕೆ ಮಾದರಿ ಪ್ರಜೆಗಳಾಗಬೇಕೆಂದು ಶರಣರು ದಿವ್ಯ ಜ್ಞಾನದ ನುಡಿಯನ್ನು ದಯಪಾಲಿಸಿದ್ದಾರೆ. ಅವರ ನುಡಿಯಂತೆ, ಅವರ ತತ್ವದಂತೆ ನಾವು ಜೀವನ ನಡೆಸಿದರೆ ಸುಖಿಗಳಾಗಿರಬಹುದು ಎಂದು ಎಂ.ಕೆ. ಲಮಾಣಿ ಹೇಳಿದರು.

ಶಿರಹಟ್ಟಿ ನಗರದ ಸಿಸಿಎನ್ ಸರ್ಕಾರಿ ಪ್ರೌಢಶಾಲೆಯಲ್ಲಿ ಶಿರಹಟ್ಟಿ ತಾಲೂಕು ಶರಣ ಸಾಹಿತ್ಯ ಪರಿಷತ್ತು ಹಾಗೂ ಕದಳಿ ಮಹಿಳಾ ವೇದಿಕೆ ಶಿರಹಟ್ಟಿ ವತಿಯಿಂದ ಹಮ್ಮಿಕೊಂಡಿದ್ದ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಉಪನ್ಯಾಸಕರಾಗಿ ಆಗಮಿಸಿದ್ದ ಬಸವರಾಜ್ ಗಿರಿತಮ್ಮಣ್ಣನವರ್ ಮಾತನಾಡಿ, ಬಸವಾದಿ ಶರಣರ ಸಂದೇಶವು ಪ್ರತಿಯೊಬ್ಬ ಸಮಾಜದ ಜೀವಿಗಳಿಗೆ ದಿವ್ಯ ಅಮೃತ ಔಷಧಿಗಳಾಗಿವೆ. 12ನೇ ಶತಮಾನದ ಶರಣರು ಹಾಕಿಕೊಟ್ಟ ಮಾರ್ಗದಲ್ಲಿ ನಾವು ನಡೆದು ಜೀವನವನ್ನು ಪಾವನ ಮಾಡಿಕೊಳ್ಳುವ ಒಂದು ಸುವರ್ಣ ಅವಕಾಶ ನಮಗೆ ನೀಡಿದ್ದಾರೆ. ಮಾನವನು ತನ್ನ ಸ್ವಾರ್ಥವನ್ನು ಬಿಟ್ಟು ಪರೋಪಕಾರ ಜೀವಿಯಾಗಿ ಬದುಕಲು ಸಾಕಷ್ಟು ಅವಕಾಶಗಳಿದ್ದರೂ ತನ್ನ ಸ್ವಾರ್ಥಕ್ಕೆ ಸಮಾಜವನ್ನು, ಪರಿಸರವನ್ನು ಹಾಳು ಮಾಡುವುದರೊಂದಿಗೆ ತನ್ನ ಜೀವನವನ್ನೂ ಹಾಳು ಮಾಡಿಕೊಳ್ಳುತ್ತಿದ್ದಾನೆ. ಶರಣರು ಹೇಳಿದ ಸಂದೇಶ ಪಾಲಿಸಿದರೆ ನಮ್ಮೆಲ್ಲರ ಜೀವನ ಪಾವನವಾಗುತ್ತದೆ ಎಂದು ಹೇಳಿದರು

ಅತಿಥಿಗಳಾಗಿ ಭಾಗವಹಿಸಿದ ಗದಗ ಜಿಲ್ಲಾ ಶ.ಸಾ.ಪ ಅಧ್ಯಕ್ಷ ಕೆ.ಎ. ಬಳಿಗೇರ ಮಾತನಾಡಿ, ಬಸವಣ್ಣವರ ಒಂದೇ ಒಂದು ವಚನವನ್ನು ನಾವು ಪಠಣ ಮಾಡಿಕೊಂಡರೆ ಈ ಜೀವನವೇ ಸಾರ್ಥಕ ಜೀವನವಾಗುತ್ತದೆ. ವಿದ್ಯಾರ್ಥಿಗಳಾದವರು ಎಲ್ಲಾ ಶರಣರ ಅಮೃತವಚನಗಳನ್ನು ಅಭ್ಯಾಸ ಮಾಡುವುದರೊಂದಿಗೆ ಅದರ ತತ್ವಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಗಣ್ಯ ವ್ಯಾಪಾರಸ್ಥರು, ಶಿಕ್ಷಣ ಪ್ರೇಮಿಗಳಾದ ಚಂದ್ರಣ್ಣ ನೂರಶೆಟ್ಟರ್ ಮಾತನಾಡಿ, ವಿದ್ಯಾರ್ಥಿಗಳ ಜೀವನ ಅಮೂಲ್ಯ ರತ್ನವಿದ್ದಂತೆ. ಈ ಸಮಯದಲ್ಲಿ ಸರಿಯಾಗಿ ಅಭ್ಯಾಸ, ಅಧ್ಯಯನ ಮಾಡುವುದರ ಮೂಲಕ ಸಮಾಜದಲ್ಲಿ ಗೌರವ ಪಡೆಯುವುದಕ್ಕೆ ಶರಣರ ಸಂದೇಶ ಸಹಾಯಕಾರಿಯಾಗಿದೆ ಎಂದು ಹೇಳಿದರು.

ದತ್ತಿ ದಾನಿಗಳಾದ ಎಚ್.ಎಂ. ದೇವಗಿರಿ ಮಾತನಾಡಿ, ನಮಗೆ ಲಭ್ಯವಾದ ಸಂಪತ್ತನ್ನು ಒಳ್ಳೆಯ ಕೆಲಸಕ್ಕೆ, ಉತ್ತಮ ಸಮಾಜ ನಿರ್ಮಾಣಕ್ಕೆ ವಿನಿಯೋಗಿಸಿದಾಗ ಶರಣರ ತತ್ವಕ್ಕೆ ನಡೆದುಕೊಂಡಂತಾಗುತ್ತದೆ ಎಂದು ನಮ್ಮ ತಂದೆಯವರ ಹೆಸರಿನಲ್ಲಿ ದತ್ತಿ ನೀಡಿ ಅವರ ಹೆಸರನ್ನು ಅಜರಾಮರವಾಗಿ ಶರಣರ ವಿಚಾರದಲ್ಲಿ ಉಳಿಯುವಂತೆ ಮಾಡುವ ಸೌಭಾಗ್ಯ ನನಗೆ ಸಿಕ್ಕಿದೆ ಎಂದು ಹೇಳಿದರು.

ಮುಖ್ಯೋಪಾಧ್ಯಾಯ ಪೊಲೀಸ್‌ಪಾಟೀಲ್ ಸ್ವಾಗತಿಸಿದರು. ಚಂಪಾ ಗುರುಮಾತೆಯರು ಕಾರ್ಯಕ್ರಮ ನಿರೂಪಿಸಿದರು. ಚೇಪಾಟಿ ಗುರುಗಳು ವಂದಿಸಿದರು. ರಾಮಣ್ಣ ಕಂಬಳಿ, ವಿ.ಸಿ. ಪೊಲೀಸ್‌ಪಾಟೀಲ್, ನಂದಕ್ಕ ಕಪ್ಪತನವರ್ ಅತಿಥಿಗಳಾಗಿ ಪಾಲ್ಗೊಂಡಿದ್ದರು.

# ಗದಗ ಸ್ಪೋರ್ಟ್ಸ್ ಅಕಾಡೆಮಿ ತಂಡಕ್ಕೆ ಜಯ





■ ವಿಜಯಸಾಕ್ಷಿ ಸುದ್ದಿ, ಗದಗ

ಕೆ.ಎಸ್.ಸಿ.ಎ. ಆಶ್ರಯದಲ್ಲಿ ನಡೆಯುತ್ತಿರುವ 14 ವರ್ಷ ವಯೋಮಿತಿಯ ಕ್ರಿಕೆಟ್ ಪಂದ್ಯದಲ್ಲಿ ಗದಗ ತಂಡ ಭರ್ಜರಿ ಜಯ ಗಳಿಸಿದೆ. ಹುಬ್ಬಳ್ಳಿಯ ಟ್ಯಾಲೆಂಟ್ ಸ್ಪೋರ್ಟ್ಸ್ ಕ್ಲಬ್ ತಂಡ ಟಾಸ್ ಗೆದ್ದು ಮೊದಲು ಫೀಲ್ಡಿಂಗ್ ಆಯ್ದುಕೊಂಡಿತ್ತು, ಗದಗ ತಂಡ 31 ಓವರ್‌ನಲ್ಲಿ 150 ರನ್ ಗಳಿಸಿತು. ಗದಗ ಪರ ಪೃಥ್ವಿ ಚಪ್ಪರಮನಿ 48, ವೇದಾಂತ 20 ರನ್ ಮಾಡಿದರು. 2ನೇ ಇನ್ನಿಂಗ್ಸ್ ಆರಂಭಿಸಿದ ಹುಬ್ಬಳ್ಳಿ ಟ್ಯಾಲೆಂಟ್ ತಂಡ ಕೇವಲ 10 ರನ್‌ಗೆ ಆಲೌಟ್ ಆಯಿತು. ಗದಗ ತಂಡದ ಬೌಲರ್‌ಗಳಾದ ಪ್ರೀತಮ್ ಮುಂಡರಗಿ 5, ರೋಹಿತ್ ಪಾಲ್ 3 ವಿಕೆಟ್ ಪಡೆದು ಮಿಂಚಿದರು.

# ಕನ್ನಡ ಸಾಹಿತ್ಯಕ್ಕೆ ಜನಪದದ ಕೊಡುಗೆ ಅಪಾರ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕನ್ನಡ ಸಾಹಿತ್ಯ ಎಲ್ಲ ಸಾಹಿತ್ಯಗಳಿಗಿಂತ ಶ್ರೇಷ್ಠವಾದದ್ದು. ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ದೊ–ರೆತಿದ್ದು, ಕನ್ನಡದ ಕುವೆಂಪು, ದ.ರಾ. ಬೇಂದ್ರೆ, ಮಾಸ್ತಿ ಅವರ ಕೊಡುಗೆ ಅಪಾರವಾಗಿದೆ. ಕನ್ನಡವನ್ನು ಲಿಪಿಗಳ ರಾಣಿ ಎಂದು ಕರೆಯಲಾಗುತ್ತದೆ. ಕನ್ನಡ ಸಾಹಿತ್ಯಕ್ಕೆ ಜನಪದದ ಕೊಡುಗೆ ಅಪಾರ ಎಂದು ಕೊಟ್ರಯ್ಯ ಹೊಂಬಾಳ್ಮಠ ಹೇಳಿದರು. ಅವರು ಶಿರಹಟ್ಟಿ ತಾಲೂಕಿನ ಬನ್ನಿಕೊಪ್ಪ ಗ್ರಾಮದ ಶ್ರೀ ಜ.ಅ. ಪದವಿಪೂರ್ವ ಮಹಾವಿದ್ಯಾಲಯ ಹಾಗೂ ಪ್ರೌಢಶಾಲೆಯಲ್ಲಿ ಶಿರಹಟ್ಟಿ ತಾಲೂಕಾ ಕಸಾಪ ವತಿಯಿಂದ ಹಮ್ಮಿಕೊಂಡಿದ್ದ ಕನ್ನಡ ಸಂಭ್ರಮಾಚರಣೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಮಾತನಾಡಿದರು.

ನಿವೃತ್ತ ಶಿಕ್ಷಕ ಬಿ.ಎಂ. ಯರಕದ ಕಾರ್ಯಕ್ರಮ ಉದ್ಘಾಟಿಸಿದರು. ವೈ.ಬಿ. ಪಾಟೀಲ, ನವೀನಕುಮಾರ ಅಳವಂಡಿ, ಬಿ.ಎಂ. ಈಟಿ, ಎ.ಎಸ್. ಮಠದ, ಮಲ್ಲೇಶ ಭಜಂತ್ರಿ, ಎಂ.ಕೆ. ರೋಣದ, ಅರುಣ ರಾವಣಕಿ, ಕುಮಾರ ಕಲ್ಮಠ, ಅಂಬಿಕಾ ಕಮ್ಮಾರ ಮುಂತಾದವರು ಉಪಸ್ಥಿತರಿದ್ದರು.



ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡರ ಹೋರಾಟಗಳನ್ನು ಮೆಚ್ಚಿ ಗದಗ ಜಿಲ್ಲಾಧ್ಯಕ್ಷ ಹನಮಂತಪ್ಪ ಹೆಚ್.ಅಬ್ಬಿಗೇರಿ ನೇತೃತ್ವದಲ್ಲಿ ರವಿ ಮಲ್ಲಾಡದ, ವಿನಾಯಕ, ಮಹೇಶ, ಅಮನ, ಸಂತೋಷ, ರಾಘು, ದರ್ಶನ್, ಜಾಕಿರ್, ಮುಸ್ತಾಕ್, ಅಲ್ಲಾಭಕ್ಷೀ ಸೇರಿದಂತೆ ಇನ್ನಿತರರು ಶನಿವಾರ ವೇದಿಕೆಗೆ ಸೇರ್ಪಡೆಗೊಂಡರು.

### ಎಸ್.ಸಿ.ಎಸ್.ಪಿ, ಟಿ.ಎಸ್.ಪಿ. ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ನಿಗದಿಪಡಿಸಿದ ಸಮಯದಲ್ಲಿ ಗುರಿ ಸಾಧಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉಪಹಂಚಿಕೆ ಯೋಜನೆಯಡಿ ಅನುಷ್ಠಾನಿತ ಕಾಮಗಾರಿಗಳ ಆರ್ಥಿಕ ಹಾಗೂ ಭೌತಿಕ ಗುರಿಯನ್ನು ನಿಗದಿತ ಕಾಲಮಿತಿಯಲ್ಲಿಯೇ ಸಾಧಿಸಬೇಕೆಂದು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಡಳಿತ ಭವನದ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಎಸ್.ಸಿ.ಎಸ್.ಪಿ. ಹಾಗೂ ಟಿ.ಎಸ್.ಪಿ. ಯೋಜನೆಯಡಿ ಜರುಗಿದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಸ್‌ಸಿ ಎಸ್‌ಟಿ ಕಾಲೋನಿಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವಾಗ ಗುಣಮಟ್ಟದ ಕಡೆಗೂ ನಿಗಾವಹಿಸಬೇಕು. ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಸಭೆಗೆ ಹಾಜರಾಗಬೇಕು. ಆಯಾ ಆರ್ಥಿಕ ಸಾಲಿನಲ್ಲಿ ಅನುಷ್ಠಾನಿತ ಕಾಮಗಾರಿಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸುವತ್ತ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು. ಯಾವುದೇ ಕಾರಣಕ್ಕೂ ಬಿಡುಗಡೆ–ಯಾದ ಅನುದಾನ ಲ್ಯಾಪ್ಸ್ ಆಗದಂತೆ ನೋಡಿಕೊಳ್ಳಬೇಕು ಎಂದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಬರಟ್ಟಿ ಅವರು ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ವಿವಿಧ ಇಲಾಖೆಗಳು ಸಾಧಿಸಿದ ಪ್ರಗತಿ ವರದಿಯನ್ನು ಸಭೆಯಲ್ಲಿ ವಿವರಿಸಿದರು.

ಈ ಸಂದರ್ಭದಲ್ಲಿ ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಎಸ್. ನೀಲಗುಂದ, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಬಿ. ಮಸನಾಯಕ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಪದ್ಮಾವತಿ ಜಿ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ ವಿಭೂತಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಮಾತನಾಡಿ, ಎಸ್‌ಸಿಪಿ/ ಟಿಎಸ್‌ಪಿ ಯೋಜನೆಯಡಿ ಬಿಡುಗಡೆಯಾದ ಅನುದಾನ ಯಾವುದೇ ಕಾರಣಕ್ಕೂ ದುರ್ಬಳಕೆಯಾಗದಂತೆ ನೋಡಿಕೊಳ್ಳಬೇಕು. ಅರ್ಹ ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯ ನಿಗದಿತ ಅವಧಿಯೊಳಗೆ ಒದಗಿಸಲು ಕ್ರಮ ವಹಿಸಬೇಕು ಎಂದರು.

# ಕನ್ನಡ ರಾಜ್ಯೋತ್ಸವ, ಮಕ್ಕಳ ದಿನಾಚರಣೆ ಕಾರ್ಯಕ್ರಮ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸುಣಗಾರ ಓಣಿಯಲ್ಲಿ ಗದಗ ಜಿಲ್ಲಾ ನಿಜಶರಣ ಅಂಬಿಗರ ಚೌಡಯ್ಯ ಸಮಾಜ ಟ್ರಸ್ಟ್ ವತಿಯಿಂದ ಕನ್ನಡ ರಾಜ್ಯೋತ್ಸವ ಹಾಗೂ ಮಕ್ಕಳ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಸಭೆಯ ಅಧ್ಯಕ್ಷತೆಯನ್ನು ಸಮಾಜ ಸಂಘಟನೆಯ ಜಿಲ್ಲಾಧ್ಯಕ್ಷ ರಾಮಣ್ಣ ಇರಕಲ್ಲ ವಹಿಸಿ ಮಾತನಾಡಿ, ಕನ್ನಡ ಭಾಷೆ ಮಾತನಾಡುವ ನಾವೆಲ್ಲರೂ ಕನ್ನಡವೇ ಸತ್ಯ ಕನ್ನಡವೇ ನಿತ್ಯ ಎಂಬ ಧ್ಯೇಯವಾಕ್ಯದಿಂದ ಕನ್ನಡ ಉಳಿಸಿ, ಕನ್ನಡ ಬೆಳೆಸಿರಿ ಎಂದರು.

ಸಮಾಜ ಸಂಘಟನೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಗಮೇಶ ಹಾದಿಮನಿ ಮಾತನಾಡಿ, ಮಕ್ಕಳ ಸಾಂಸ್ಕೃತಿಕ ವೇಷ–ಭೂಷಣ ನಾಡಿನ ಪರಂಪರೆಯನ್ನು ಬಿಂಬಿಸುತ್ತದೆ. ನಾಡಿನ ಕಲೆ, ಸಾಹಿತ್ಯ, ವಾಸ್ತುಶಿಲ್ಪ ನಾಡಿನ ಸಾಂಸ್ಕೃತಿಕ ಪರಂಪರೆಯನ್ನು ಮುಂದುವರೆಸಿಕೊಂಡು ಹೋಗುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಶಿಕ್ಷಕರಾದ ಬಸವರಾಜ ಹಾಗೂ ದೀನಬಂಧು ಆದಿ ಕನ್ನಡ ನಾಡು–ನುಡಿ ಹಾಗೂ ಕನ್ನಡ ಪ್ರೀತಿಯ ಅಕ್ಕರೆಯ ಮಾತುಗಳನ್ನಾಡಿದರು.

ಈ ಸಂದರ್ಭದಲ್ಲಿ ಹರೀಶ ಬಾರಕೇರ, ಮಂಜುನಾಥ ಗುಡಿಸಾಗರ, ರಾಜು ಪೂಜಾರ, ಮಹಿಳಾ ಸಂಘಟನೆಯ ಅಧ್ಯಕ್ಷ ಸುಜಾತ ಗುಡಿಸಾಗರ, ಆನಂದ ಸುಣಗಾರ, ದೇವು ನವಲಗುಂದ, ಗಿರಿಜಾ ಬಾರಕೇರ, ಕವಿತಾ ಗುಡಿಸಾಗರ, ಸೌಮ್ಯ ಸುಣಗಾರ ಮಹಿಳಾ ಸಂಘಟನೆಯ ಪದಾಧಿಕಾರಿಗಳು ಹಾಗೂ ಸಮಾಜ ಬಾಂಧವರು ಉಪಸ್ಥಿತರಿದ್ದರು.

### ಕ.ವಿ.ವ ಸಂಘದಿಂದ 'ಕನ್ನಡ–ಕನ್ನಡಿಗ–ಕರ್ನಾಟಕ' ಉಪನ್ಯಾಸ ಕಾರ್ಯಕ್ರಮ

# ಕನ್ನಡ ಕಟ್ಟಲು ಸಂಘಟಿತರಾಗಿ ಹೋರಾಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಿಗೆ ನಮ್ಮ ಕನ್ನಡದ ಕವಿಗಳೇ ಆದರ್ಶ. ಡಿ.ಎಸ್. ಕರ್ಕಿ, ಹುಯಿಲಗೋಳ ನಾರಾಯಣರಾವ, ಸಿದ್ದಯ್ಯ ಪುರಾಣಿಕ, ಕುವೆಂಪು, ಚೆನ್ನವೀರ ಕಣವಿಯಂತಹ ಕನ್ನಡದ ಮಹಾನ್ ಕವಿಗಳು ಸ್ವತಃ ಕನ್ನಡಾಭಿಮಾನದ ಹಾಡು ರಚಿಸಿ, ಹಾಡಿ ಕನ್ನಡಿಗರಲ್ಲಿ ಜಾಗೃತಿ ಮೂಡಿಸಿದರು ಎಂದು ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಹೇಳಿದರು.

ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಕವಿವ ಸಂಘವು ಆಯೋಜಿಸಿದ್ದ 'ಕನ್ನಡ–ಕನ್ನಡಿಗ–ಕರ್ನಾಟಕ' ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಕ್ಕರಿ ಬಾಳಾಚಾರ್ಯರು ಧಾರವಾಡದಲ್ಲಿ ಜರುಗಿದ 4ನೇ ಕನ್ನಡ ಸಾಹಿತ್ಯ ಸಮ್ಮೇಳನ ಹಣಕಾಸಿನ ಮುಗ್ಗಟ್ಟಿನಿಂದ ಸ್ಥಗಿತಗೊಳ್ಳುವ ಸಂದರ್ಭ ಬಂದಾಗ ಪ್ರತಿಯೊಬ್ಬರ ಮನೆ ಬಾಗಿಲಿಗೆ ಹೋಗಿ ಕನ್ನಡದ ದಾಸಯ್ಯ ಬಂದಿದ್ದಾನೆಂದು ಜೋಳಿಗೆ ಹಾಕಿ ಹಣ ಸಂಗ್ರಹಿಸಿದರು. ಕವಿವ ಸಂಘವು 136 ವರ್ಷಗಳಿಂದ ಒಡೆದ ಕನ್ನಡಿಗರ ಮನಸ್ಸು ಕಟ್ಟುವ ಕಾರ್ಯ ಮಾಡುತ್ತಿದೆ. ಜಾತಿ–ಧರ್ಮದ ಹೆಸರಿನಲ್ಲಿ ಕನ್ನಡ ಭಾಷೆ ಆಪತ್ತಿನಲ್ಲಿದ್ದು, ಯುವಕರು ಕನ್ನಡ ಕಟ್ಟಲು ಸಂಘಟನೆ ಮೂಲಕ ಹೋರಾಡಬೇಕು ಎಂದರು.

ಪ್ರಾಚಾರ್ಯ ಡಾ. ಎಸ್. ಎಂ. ಕುರಿ ಉಪನ್ಯಾಸ ನೀಡಿ, ಕವಿವ ಸಂಘಕ್ಕೆ 136 ವರ್ಷಗಳ ಇತಿಹಾಸವಿದೆ. ನಾಡೋಜ ಡಾ. ಪಾಟೀಲ ಪುಟ್ಟಪ್ಪನವರು ಅಧ್ಯಕ್ಷರಾಗಿ 53 ವರ್ಷ ಸುದೀರ್ಘವಾಗಿ ಸಂಘವನ್ನು ಮುನ್ನಡೆಸಿದರು. ಕನ್ನಡ ನಾಡಿನಷ್ಟು ಸಮೃದ್ಧ, ಶ್ರೀಮಂತ ರಾಜ್ಯ ಬೇರೊಂದಿಲ್ಲ. ಕನ್ನಡದ ಅನೇಕ ಶಾಸನಗಳು ಕನ್ನಡ ನಾಡಿನ ಜನರ ಗುಣಸ್ವಭಾವ, ಸಮೃದ್ಧತೆ, ಉದಾರತೆಯ ಬಗ್ಗೆ ಮುಕ್ತ ಕಂಠದಿಂದ ಹೊಗಳಿವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ಸುಧಾಕ ್ಜಗೇರಿ ಮಾತನಾಡಿದರು. ಡಾ. ಮಹಾನಂದ ಹಿರೇಮಠ ಸ್ವಾಗತಿಸಿದರು. ಕವಿವ ಸಂಘದ ಶಿಕ್ಷಣ ಮಂಟಪದ ಸಂಚಾಲಕ ವೀರಣ್ಣ ಒಡ್ಡಿನ ಪ್ರಾಸ್ತಾವಿಕವಾಗಿ ಮಾತನಾಡಿದರು. ಭೀಮಸಿ ನಿರೂಪಿಸಿದರು, ಡಾ ಮಂಜುನಾಥ್ ತ್ಯಾಲಗಡಿ ವಂದಿಸಿದರು. ಡಾ. ರಮೇಶ ಹುಲಕುಂದ ಕಾರ್ಯಕ್ರಮ ಸಂಯೋಜಿಸಿದ್ದರು. ಡಾ. ಲಕ್ಷ್ಮಣ ಮುಳುಗುಂದ, ಡಾ. ಅಣ್ಣಪ್ಪ ಹಂಜೆ, ಡಾ. ಉಲ್ಲಾಸ ಶೆಟ್ಟಿ, ಸಿಬ್ಬಂದಿಗಳು ಸೇರಿದಂತೆ ವಿದ್ಯಾರ್ಥಿಗಳಿದ್ದರು. ಕೊತಬಾಳದ ಶಂಕ್ರಣ್ಣ ಸಂಕಣ್ಣವರ್ ತಂಡದಿಂದ ನಾಡು–ನುಡಿ ಜಾಗೃತಿಯ ಹಾಡುಗಳು ಪ್ರಸ್ತುತವಾದವು.



ಅತಿಥಿಗಳಾದ ಡಾ. ಅರ್ಜುನ್ ಗೊಳಸಂಗಿ ಮಾತನಾಡಿ, ನೆರೆಯ ತಮಿಳು ಹಾಗೂ ತೆಲುಗರಿಗಿರುವಷ್ಟು ಭಾಷಾಭಿಮಾನ ನಮ್ಮಲ್ಲಿಲ್ಲ. ಕನ್ನಡ ಒಂದು ಭಾಷೆ ಮಾತ್ರವಲ್ಲ, ಅದು ನಾಡು, ನಮ್ಮ ಜೀವನ ವಿಧಾನ. ಭಾಷೆ ಬಗ್ಗೆ ಅನ್ಯಥಾ ದ್ವೇಷ ಬೇಡ. ಕನ್ನಡದಲ್ಲಿ ಮಾತಾಡಿ, ಬರೆದು, ವ್ಯವಹರಿಸಿ ಕನ್ನಡ ಭಾಷಾಭಿಮಾನ ಹೊಂದಬೇಕೇ ವಿನಃ ಭಾಷೆಯ ಬಗ್ಗೆ ದುರಭಿಮಾನಿಗಳಾಗಬಾರದು ಎಂದು ಹೇಳಿದರು.

## ಬೆಳಕಿನಲ್ಲಿ ಮನುಕುಲದ ಕಲ್ಯಾಣವಿದೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹಾತಲಗೇರಿ ನಾಕಾದ ಕನಕ ವೃತ್ತದಲ್ಲಿ ಕನಕ ಕಾರ್ತಿಕೋತ್ಸವವನ್ನು ಸಮರ್ಪಣಾ ಭಾವದಿಂದ ಆಚರಿಸಲಾಯಿತು. ಗದಗ ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಫಕ್ಕೀರಪ್ಪಣ್ಣ ಹೆಬಸೂರ ಅವರು ಕನಕದಾಸರ ಭಾವಚಿತ್ರಕ್ಕೆ ಪುಷ್ಪ ಸಮರ್ಪಣೆ ಮಾಡಿ ದೀಪ ಬೆಳಗಿಸಿ ಮಾತನಾಡಿ, ಮನುಷ್ಯನು ತನ್ನಲ್ಲಿರುವ ಅಜ್ಞಾನದ ಕತ್ತಲೆಯನ್ನು ನಿವಾರಿಸಿಕೊಳ್ಳಲು ಮಹಾತ್ಮರ ಬದುಕಿನ ಜೀವನ ಸಂದೇಶದ ಬೆಳಕಿನಲ್ಲಿ ಬದುಕನ್ನು ರೂಪಿಸಿಕೊಳ್ಳವುದೇ ಕಾರ್ತಿಕೋತ್ಸವದ ಆಚರಣೆಯು ಮುಖ್ಯ ಉದ್ದೇಶ. ಭರತಖಂಡದಲ್ಲಿ ವಿಭೂತಿಪುರುಷರು, ಅನುಭಾವಿಗಳು, ಶರಣರು, ಸಂತರು, ದಾಸರು ತಮ್ಮ ಜೀವನದ ನಡೆ-ನುಡಿಗಳಿಂದ ಮನುಕುಲದ ಕಲ್ಯಾಣವನ್ನು ಬಯಸಿದ್ದಾರೆ. ಅವರ ಆದರ್ಶದಲ್ಲಿ ನಮ್ಮ ಬದುಕನ್ನು ಬೆಳಕಿನತ್ತ ಸಾಗಿಸಬೇಕೆಂದು ನುಡಿದರು.

ಕಾರ್ಯಕ್ರಮದಲ್ಲಿ ಜಾನಪದ ವಿದ್ವಾಂಸರಾದ ಡಾ. ಎಸ್.ಎಫ್. ಜಕಬಾಳ, ಸಾಹಿತಿಗಳಾದ ಡಾ. ಎನ್.ಎಂ. ಅಂಬಲಿಯವರ, ಡಾ. ಎಸ್.ಎನ್. ವೆಂಕಟಾಪೂರ, ಅರುಣೋದಯ ವಾಯು ವಿಹಾರ ಸಂಘದ ಪ್ರೊ. ಎಂ.ಸಿ. ವಗ್ಗಿ, ಪ್ರಭಾಕರ ನಾರಾಯಣಪೂರ, ಪ್ರೊ. ಮಾರುತಿ ಮಡ್ಡಿ, ಸೋಮಣ್ಣ ಬೆನಕವಾರಿ, ಎಚ್.ಎನ್. ಚಿಗರಿ, ಹಾಲೇಶ ಶಹಪೂರ, ಉಮೇಶ ಹಡಪದ, ಸುಭಾಷ ಪರಸುನಾಯಕರ, ವಾಯ್.ಬಿ. ಪಿಡಗಣ್ಣವರ, ಶಿಕ್ಷಕರಾದ ಕಂಕರಿ, ಅಶೋಕ ಕೊಡಗಲಿ, ನಾಗಪ್ಪ ತೋಟಗೇರಿ ಸೇರಿದಂತೆ ಭಕ್ತಾಧಿಗಳು ಪಾಲ್ಗೊಂಡಿದ್ದರು.


### ರೈತರ ಅಹೋರಾತ್ರಿ ಧರಣಿ ಸತ್ಯಾಗ್ರಹದ ಸ್ಥಳಕ್ಕೆ ಭೇಟಿಯಿತ್ತ ಸಂಸದ ಬಸವರಾಜ ಬೊಮ್ಮಾಯಿ

# ರಾಜ್ಯ ಸರಕಾರ ಕೇಂದ್ರದೆಡೆಗೆ ಬೊಟ್ಟು ಮಾಡುವದನ್ನು ಬಿಡಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗೋವಿನಜೋಳ ಖರೀದಿ ಕೇಂದ್ರವನ್ನು ಆರಂಭಿಸುವಂತೆ ಆಗ್ರಹಿಸಿ ಕಳೆದ 8 ದಿನಗಳಿಂದ ಪಟ್ಟಣದ ಶಿಗ್ಲಿ ನಾಕಾದ ವೀರಸಂಗೋಳ್ಳಿ ರಾಯಣ್ಣ ವೃತ್ತದ ಬಳಿ ನಡೆದಿರುವ ರೈತರ ಅಹೋರಾತ್ರಿ ಧರಣಿ ಸತ್ಯಾಗ್ರಹದ ಸ್ಥಳಕ್ಕೆ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಶನಿವಾರ ಭೇಟಿ ನೀಡಿ, ಪ್ರತಿಭಟನಾಕಾರರೊಂದಿಗೆ ಮಾತನಾಡಿ, ಉಪವಾಸ ಸತ್ಯಾಗ್ರಹ ಮುಂದುವರೆಸಿರುವ ಹೋರಾಟಗಾರರ ಆರೋಗ್ಯ ವಿಚಾರಿಸಿದರು.

ನಂತರ ಸೇರಿದ್ದ ರೈತರನ್ನು ಉದ್ದೇಶಿಸಿ ಮಾತನಾಡಿದ ಸಂಸದರು, ಕೇಂದ್ರ ಹಾಗೂ ರಾಜ್ಯ ಸರಕಾರ ಸಮನ್ವಯದಿಂದ ಕೆಲಸ ಮಾಡಿದಾಗ ರೈತರನ್ನು



ಉಳಿಸಬಹುದು. ಕೇಂದ್ರದೆಡೆಗೆ ರಾಜ್ಯ ಸರಕಾರ ಬೊಟ್ಟು ಮಾಡುವದನ್ನು ಬಿಡಬೇಕು. ಲಕ್ಷ್ಮೇಶ್ವರ ಭಾಗದ ರೈತರ ಹೋರಾಟದಿಂದ ಮೆಕ್ಕೆಜೋಳ ಬೆಳೆದ ರಾಜ್ಯದ ರೈತರಿಗೆ ನ್ಯಾಯ ದೊರಕುವಂತಾಗಿದ್ದು ಹೆಮ್ಮೆಯ ಸಂಗತಿಯಾಗಿದೆ. ಈಗ ಸರ್ಕಾರ ಖರೀದಿ ಕೇಂದ್ರ ತೆರೆಯುತ್ತೇವೆ ಎಂದಿದೆ. ಯಾವ ಏಜೆನ್ಸಿ ಮೂಲಕ ಖರೀದಿ ಮಾಡುತ್ತಾರೆ ಎಂಬುದನ್ನು ತಿಳಿಸಿಲ್ಲ. ಯಾವ ಏಜೆನ್ಸಿಯಿಂದ ಖರೀದಿಸುತ್ತಾರೆ ಎನ್ನುವುದು ಮುಖ್ಯ. ಮಾರುಕಟ್ಟೆಗೆ 54 ಲಕ್ಷ ಮೆಟ್ರಿಕ್ ಟನ್ ಮೆಕ್ಕೆಜೋಳ ಬರುತ್ತದೆ. ಹೀಗಾಗಿ ಹೆಚ್ಚಿಗೆ ಖರೀದಿಗೆ ಆದೇಶ ಮಾಡಬೇಕು. ಕೆಎಂಎಫ್‌ನಿಂದ ನೇರ ಖರೀದಿಸಲು ಸೂಚಿಸಬೇಕು. ಎಥೆನಾಲ್ ಕಂಪನಿಗಳು ಗೋವಿನ ಜೋಳ ಖರೀದಿಸುತ್ತಿವೆ. ಅವರು ಏಜೆಂಟರಿಂದ ಖರೀದಿಸುತ್ತಾರೆ. ಅದನ್ನು ತಪ್ಪಿಸಿ ನೇರವಾಗಿ ರೈತರಿಂದ ಖರಿದಿಸುವ ವ್ಯವಸ್ಥೆ ಮಾಡಬೇಕು. ಸುಮಾರು 35 ಎಥೆನಾಲ್ ಫ್ಯಾಕ್ಟರಿಗಳಿವೆ. ರಾಜ್ಯ ಸರ್ಕಾರ ರೈತರ ಜೊತೆಗಿದೆ-ಯೋ ಅಥವಾ ಕಾರ್ಖಾನೆ ಮಾಲೀಕರ ಜೊತೆ ಇದೆಯೊ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ನಾನು ಸಿಎಂ ಆಗಿದ್ದಾಗ ಪ್ರವಾಹ ಬಂದ ಸಂದರ್ಭದಲ್ಲಿ ಇಂದಿನ ಸಿಎಂ ಸಿದ್ದರಾಮಯ್ಯನವರು ಪರಿಹಾರ ಯಾವಾಗ ಕೊಡುತ್ತೀರಿ ಎಂದು ಟೇಬಲ್ ಕುಟ್ಟಿ ಕೇಳಿದರು. ನಾನು ಕೇಂದ್ರ ಸರ್ಕಾರ ನೀಡುವ ಎರಡು ಪಟ್ಟು ಕೊಟ್ಟಿದ್ದೆ. ಯಾವುದಕ್ಕೂ ಕೇಂದ್ರದ ಕಡೆಗೆ ಬೊಟ್ಟು ಮಾಡಿ ತೋರಿಸಲಿಲ್ಲ.

> ರಾಜ್ಯ ಸರ್ಕಾರ ರೈತರ ಮಾಲನ್ನು ವಾಪಸ್ ಕಳುಹಿಸದೇ ಖರೀದಿ ಮಾಡಬೇಕು. ರಾಜ್ಯ ಸರ್ಕಾರ ಬೆಲೆ ನಿಗದಿ ಮಾಡಲು ಆಯೋಗ ರಚನೆ ಮಾಡಿತ್ತು. ಆ ಆಯೋಗ ವರದಿ ನೀಡಿದೆ. ಅದರ ಆಧಾರದಲ್ಲಿ ವೈಜ್ಞಾನಿಕವಾಗಿ ದರ ನಿಗದಿ ಮಾಡಲಿ. ಈಗಾಗಲೇ ಹೆಸರು ಕೇಂದ್ರ ತೆರೆದಿದ್ದಾರೆ. ಅಲ್ಲಿ ಗ್ರೇಡಿಂಗ್ ಮಾಡಿ ರೈತರನ್ನು ವಾಪಸ್ ಕಳುಹಿಸುತ್ತಿದ್ದಾರೆ. ಗೋವಿನ ಜೋಳದ ವಿಚಾರದಲ್ಲಿಯೂ ಹಾಗೆ ಆಗಬಾರದು ಅದಕ್ಕಾಗಿ ಎಲ್ಲ ಖರೀದಿ ಕೇಂದ್ರದಲ್ಲೂ ರೈತ ಪ್ರತಿನಿಧಿಗಳನ್ನು ಕೂಡಿಸಬೇಕು ಎಂದು ಸಂಸದ ಬೊಮ್ಮಾಯಿ ಹೇಳಿದರು.

ರೈತರನ್ನು ಉಳಿಸಿಕೊಳ್ಳಬೇಕೆಂಬ ಮನಸ್ಸಿರಬೇಕು. ಕೇಂದ್ರ ಸರ್ಕಾರ ತನ್ನ ಹೊಣೆಗಾರಿಕೆ ತೋರಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ರವಿಕಾಂತ ಅಂಗಡಿ, ಮಂಜುನಾಥ ಮಾಗಡಿ, ಬಸವರಾಜ ಬೆಂಡಿಗೇರಿ, ಪೂರ್ಣಾಜಿ ಕರಾಟೆ, ಹಿರಿಯ ಮುಖಂಡ ಸಣ್ಣೀರಪ್ಪ ಹಳ್ಳೆಪ್ಪನವರ, ನಾಗರಾಜ ಚಿಂಚಲಿ, ಮಹೇಶ ಹೊಗೆಸೊಪ್ಪಿನ, ಶರಣು ಗೋಡಿ, ಎಂ.ಎಸ್. ದೊಡ್ಡಗೌಡ್ರ, ಹೊನ್ನಪ್ಪ ವಡ್ಡರ, ಚಂಬಣ್ಣ ಬಾಳಿಕಾಯಿ, ನಿಂಬಣ್ಣ ಮಡಿವಾಳರ, ನೀಲಪ್ಪ ಶೆರಸೂರಿ, ಪ್ರವೀಣ ಬಾಳಿಕಾಯಿ, ಗಿರೀಶ ಅಗಡಿ, ಪ್ರಕಾಶ ಕೊಂಚಿಗೇರಿಮಠ, ದಾದಾಪೀರ ಮುಚ್ಚಾಲೆ, ಬಸವರಾಜ ಅರಳಿ, ಸುರೇಶ ಹಟ್ಟಿ, ಮಂಜುನಾಥ ಮುಳಗುಂದ, ಮಲ್ಲಿಕಾರ್ಜುನ ನಿರಾಲೋಟ್, ಟಾಕಪ್ಪ ಸಾತಪೂತೆ, ರಾಮಣ್ಣ ಗೌರಿ ಸೇರಿದಂತೆ ಅನೇಕ ರೈತರು ಇದ್ದರು.

### ಕುಷ್ಟರೋಗ ಪತ್ತೆ ಅಭಿಯಾನದ ಪೂರ್ವಭಾವಿ ಸಭೆಯಲ್ಲಿ ಸಿದ್ದಪ್ಪ ಅಂಗದಾಳ

# ಕುಷ್ಟರೋಗ ಪ್ರಕರಣ ಪತ್ತೆ ಅಭಿಯಾನ ಯಶಸ್ವಿಗೊಳಿಸಿ



> ಆರೋಗ್ಯ ನಿರೀಕ್ಷಣಾಧಿಕಾರಿ ಮುತ್ತಪ್ಪ ಹಟ್ಟಿಮನಿ ಮಾತನಾಡಿ, ಕುಷ್ಟರೋಗವನ್ನು ಮುಖ್ಯವಾಗಿ ದೇಹದ ಯಾವುದೇ ಭಾಗದಲ್ಲಿ ಕಂಡುಬರುವ ತಿಳಿ ಬಿಳಿ ಅಥವಾ ತಾಮ್ರ ಬಣ್ಣದ ಸ್ಪರ್ಶಜ್ಞಾನ ಇಲ್ಲದೆ ಇರುವ ಮಚ್ಚೆಗಳು ಮತ್ತು ಚರ್ಮ, ಕಿವಿಯ ಹಾಲೆ ಮುಖ ಮತ್ತು ಕೈಕಾಲುಗಳ ಮೇಲೆ ಕಂಡುಬರುವ ಗಂಟುಗಳು, ಊದಿಕೊಂಡ ನರಗಳು ಕಂಡುಬಂದರೆ ಮಾಹಿತಿಯನ್ನು ನೀಡಿ ಸಹಕರಿಸಬೇಕು ಹೇಳಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಕುಷ್ಟರೋಗವು ಮೈಕೋ ಬ್ಯಾಕ್ಟೀರಿಯಮ್ ಲೆಪ್ರಿ ಎಂಬ ರೋಗಾಣುವಿನಿಂದ ಉಂಟಾಗುವ ಸಾಂಕ್ರಾಮಿಕ ರೋಗವಾಗಿದ್ದು, ಮುಖ್ಯವಾಗಿ ಇದು ಚರ್ಮ ಹಾಗೂ ನರಗಳಿಗೆ ಸಂಬಂಧಿಸಿದ ರೋಗವಾಗಿದೆ. ಇದನ್ನು ಎಮ್‌ಡಿಟಿ ಚಿಕಿತ್ಸೆಯ ಮೂಲಕ ಗುಣಪಡಿಸಬಹುದಾಗಿದ್ದು, ನವೆಂಬರ್ 24ರಿಂದ ಡಿಸೆಂಬರ್ 9ರವರೆಗೆ ನಡೆಯಲಿರುವ ಕುಷ್ಟರೋಗ ಪ್ರಕರಣ ಪತ್ತೆ ಹಚ್ಚುವ ಅಭಿಯಾನವನ್ನು ಯಶಸ್ವಿಗೊಳಿಸಬೇಕೆಂದು ಆರೋಗ್ಯ ನಿರೀಕ್ಷಣಾಧಿಕಾರಿ ಸಿದ್ದಪ್ಪ ಎನ್.ಲಿಂಗದಾಳ ಸಮೀಕ್ಷಣಾ ತಂಡಕ್ಕೆ ಸೂಚಿಸಿದರು.

ಅವರು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕುಷ್ಟರೋಗ ವಿಭಾಗ ಗದಗ, ತಾಲೂಕ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ, ಪ್ರಾಥಮಿಕ ಆರೋಗ್ಯ ಕೇಂದ್ರ ಲಕ್ಕುಂಡಿ ಇವುಗಳ ಸಂಯುಕ್ತ ಆಶ್ರಯದಲ್ಲಿ ಅಡವಿಸೋಮಾಪೂರ, ಲಕ್ಕುಂಡಿ ಮತ್ತು ಹಾತಲಗೇರಿ ಗ್ರಾಮದಲ್ಲಿ ಅಭಿಯಾನದ ಪೂರ್ವಭಾವಿ ಸಭೆ ಹಾಗೂ ಸಿದ್ಧತಾ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಪ್ರತಿದಿನ ಬೆಳಿಗ್ಗೆ 8 ಗಂಟೆಗೆ ಸಮೀಕ್ಷಾ ತಪಾಸಣೆ ಕಾರ್ಯಕ್ರವನ್ನು ಆರಂಭಿಸಿ ಪ್ರತಿದಿನ 20 ಮನೆಗಳ ವರದಿಯನ್ನು ಮೇಲ್ವಿಚಾರಕರಿಗೆ ತಲುಪಿಸಬೇಕು. ಪ್ರತಿಯೊಬ್ಬರಿಗೂ ಕುಷ್ಟರೋಗದ ಬಗ್ಗೆ ಅರಿವು ಮೂಡಿಸುವಲ್ಲಿ ಗುಂಪುಸಭೆ ನಡೆಸಿ. ದೇಹದ ಯಾವುದೇ ಭಾಗದಲ್ಲಿ ತಿಳಿ ಬಿಳಿ, ತಾಮ್ರ ವರ್ಣದ ಸ್ಪರ್ಶಜ್ಞಾನ ಇಲ್ಲದ ತದ್ದು ಮಚ್ಚೆಗಳು ಇದ್ದರೆ ಅಥವಾ ಕಣ್ಣಿನ ರೆಪ್ಪೆಗಳು ಉದುರಿದ್ದರೆ ಅವು ಕುಷ್ಟರೋಗದ ಲಕ್ಷಣ ಇರಬಹು. ಈ ಬಗ್ಗೆ ಪ್ರತಿಯೊಂದು ಮನೆಯವರಿಗೆ ಅರಿವನ್ನು ಮೂಡಿಸಬೇಕೆಂದು ಹೇಳಿದರು.

ಅಧ್ಯಕ್ಷತೆಯನ್ನು ವೈದ್ಯಾಧಿಕಾರಿ ಡಾ. ವರ್ಷಾ ಬ್ಯಾಲಿಹಾಳ ವಹಿಸಿದ್ದರು. ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಎಸ್.ಬಿ. ಗಡಾದ, ವೈ.ಎನ್. ಕಡೆಮನಿ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ಹುಲಿಗೆಮ್ಮ ಮಾದರ, ಚಂದ್ರಪ್ರಭಾ ತೋಟದ, ಗಂಗಮ್ಮ ಕುಂಬಾರ, ಸಲ್ಮಾ ಕುಕನೂರ ಹಾಗೂ ಆಶಾ ಕಾರ್ಯಕರ್ತೆಯರು ಪಾಲ್ಗೊಂಡಿದ್ದರು. ಗಾಯತ್ರಿ ಬಡಿಗೇರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ದರ್ಗಾ ಶಾಂತಿ, ಮಾನವೀಯ ಮೌಲ್ಯಗಳ ಕೇಂದ್ರ

▸▸ಮೊದಲನೇ ಪುಟದಿಂದ

ಯುವ ಮುಖಂಡ ಮುನ್ನಾಸಾಬ ರೇಶ್ಮಿ ಮಾತನಾಡಿ, ಹಜರತ್ ಸೈಯದ್ ಶಾವಲಿ ದರ್ಗಾದ ನವೀಕರಿಸಲಾದ ಕಟ್ಟಡ ಹಾಗೂ ನೂತನ ನೆಮ್ಮದಿ ಭವನ ನಿರ್ಮಾಣಕ್ಕೆ ಅನುದಾನ ನೀಡಿ ಸಮಾಜಬಾಂಧವರಿಗೆ ಅನುಕೂಲ ಕಲ್ಪಿಸಿದ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹಾಗೂ ಗಣ್ಯರನ್ನು ಶ್ಲಾಘಿಸಿದರು.

ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರು, ಮಹಾರಾಷ್ಟ್ರದ ಸಜ್ಜಾದೆ ನಶೀನ ನಿಲಂಗಾ ಶರೀಫನ ಹಜರತ್ ಸಯ್ಯದ್ ಹೈದರಪಾಷಾ ಖಾದರಿ ಸಾನ್ನಿಧ್ಯ ವಹಿಸಿದ್ದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ನಗರಸಭೆ ಸದಸ್ಯರಾದ ಆಸ್ಮಾ ಮುನ್ನಾಸಾಬ ರೇಶ್ಮಿ, ಜೈನುಲಾಬ್ದೀನ್ ಆರ್.ನಮಾಜಿ, ಬರಕತಅಲಿ ಮುಲ್ಲಾ, ಪರವೀನಬಾನು ಮುಲ್ಲಾ, ಧಾರವಾಡದ ಕುತುಬಅಲಿಶಾ ಮದಾರಿ, ಗಣ್ಯರಾದ ಖಲಂದರ ಗೌಸುಸಾಬ ರೆಹಮಾನವರ, ಪ್ರಭು ಬುರಬುರೆ, ಈಶ್ವರಸಾ ಮೇರವಾಡೆ, ರತ್ನಾಕರಭಟ್ ಜೋಶಿ, ಎಸ್.ಡಿ. ಮಕಾನದಾರ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾದಿಕಾರದ ಬಿ.ಬಿ. ಅಸೂಟಿ, ಅಶೋಕ ಮಂದಾಲಿ, ಅನಿಲ ಸಿದ್ದಮ್ಮನಹಳ್ಳಿ, ಇಂಜಿನಿಯರ್ ಎ.ಎಚ್. ಹೊಸಳ್ಳಿ, ಅಬ್ದುಲರಜಾಕ್ ಡಂಕೇದ, ಮೊಹ್ಮದಯುಸುಫ್ ಇಟಗಿ, ಮೀರಾಸಾಬ ಕಲ್ಯಾಣಿ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ಸಜ್ಜಾದೇ ನಶಿನ್ ಖ್ವಾಜಾ ಬಂದೇ ನವಾಜ್ ಗೇಸುದರಾಜ್ ದರ್ಗಾದ ಹಜರತ್ ಸೈಯದ್ ಮೊಹಮ್ಮದ್ ಅಲಿ ಅಲ್ ಹುಸೇನಿ ಅವರು ಧಾರ್ಮಿಕ ಮಂತ್ರೋಚ್ಚಾರಣೆ ಮಾಡಿದರು. ಜಿಲ್ಲಾ ಸರಕಾರಿ ವಕೀಲರಾದ ಎಂ.ಎಂ. ಕುಕನೂರ ಸ್ವಾಗತಿಸಿದರು. ಎಂ.ಎಂ. ಶಿರಹಟ್ಟಿ, ಅಲ್ಲಾಭಕ್ಷ ಕೊಟಗಿ ಕಾರ್ಯಕ್ರಮ ನಿರೂಪಿಸಿದರು. ಮಹ್ಮದಲಿ ರೆಹಮಾನಸಾಬ ಕಾಗದಗಾರ ವಂದಿಸಿದರು.

# ಬೆಂಗಳೂರು| 7.11 ಕೋಟಿ ರೂ. ದರೋಡೆ ಪ್ರಕರಣ : ಮೂವರು ಆರೋಪಿಗಳ ಸೆರೆ, 5.76 ಕೋಟಿ ರೂ. ವಶ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಎಟಿಎಂ ಯಂತ್ರಗಳಿಗೆ ತುಂಬಿಸಲು ಕೊಂಡೊಯ್ಯುತ್ತಿದ್ದ 7.11 ಕೋಟಿ ರೂಪಾಯಿ ದ-ರೋಡೆಗೈದ ಪ್ರಕರಣದ ಮೂವರು ಆರೋಪಿಗಳನ್ನು ಬೆಂಗಳೂರು ದಕ್ಷಿಣ ವಿಭಾಗದ ಪೊಲೀಸರು ಬಂಧಿಸಿದ್ದಾರೆ.



ಸಿಎಂಎಸ್ ಸೆಕ್ಯುರಿಟೀಸ್ ಕಸ್ಟೋಡಿಯನ್ ವಾಹನದ ಮೇಲ್ವಿಚಾರಕ ರವಿ, ಮಾಜಿ ಉದ್ಯೋಗಿ ಕ್ಸೆವಿಯರ್ ಹಾಗೂ ಗೋವಿಂದಪುರ ಠಾಣೆಯ ಕಾನ್‌ಸ್ಟೇಬಲ್ ಅಣ್ಣಪ್ಪ ನಾಯ್ಕ್ ಬಂಧಿತರು. ಇವರಿಂದ 5.76 ಕೋಟಿ ರೂಪಾಯಿ ವಶಕ್ಕೆ ಪಡೆಯಲಾಗಿದೆ.

ಪ್ರಕರಣ ವರದಿಯಾದ 54 ಗಂಟೆಯೊಳಗೆ ಮೂವರು ಆರೋಪಿಗಳನ್ನು ಬಂಧಿಸಲಾಗಿದ್ದು, ಕೃತ್ಯದಲ್ಲಿ ಆರರಿಂದ 8 ಜನರು ಶಾಮೀಲಾಗಿರುವ ಸಾಧ್ಯತೆಯಿದೆ. ಉಳಿದ ಆರೋಪಿಗಳಿಗಾಗಿ ಹುಡುಕಾಟ ಮುಂದುವರಿಸಲಾಗಿದೆ ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಇಂದು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ್ದಾರೆ.

ಮೂರು ತಿಂಗಳಿನಿಂದ ಸಂಚು ಆರೋಪಿಗಳು ಮೂರು ತಿಂಗಳಿನಿಂದ ದರೋಡೆಗೆ ಸಂಚು ರೂಪಿಸಿದ್ದರು. ಕೃತ್ಯಕ್ಕೆ 15 ದಿನಗಳಿಂದಲೂ ಸ್ಥಳ ನಿಗದಿ ಮಾಡಿದ್ದರು. ನವೆಂಬರ್ 19ರಂದು 12:48ರ ಸುಮಾರಿಗೆ ನಕಲಿ ನಂಬರ್ ಪ್ಲೇಟ್ ಅಳವಡಿಸಿದ್ದ ಕಾರಿನಲ್ಲಿ ಅಶೋಕ ಪಿಲ್ಲರ್ ಜಯನಗರ ಡೇರಿ ಸರ್ಕಲ್ ಮಾರ್ಗದಲ್ಲಿ ಬಂದು, ಕಸ್ಟೋಡಿಯನ್ ವಾಹನವನ್ನು ಅಡ್ಡಗಟ್ಟಿ ತಾವು ಆರ್‌ಬಿಐ ನಿಯಂತ್ರಣಾಧಿಕಾರಿಗಳೆಂದು ಭದ್ರತಾ ಸಿಬ್ಬಂದಿ ಹಾಗೂ ಕಸ್ಟೋಡಿಯನ್ ಸಿಬ್ಬಂದಿಯನ್ನು ಕೆಳಗಿಳಿಸಿದ್ದರು. ನಂತರ ಮತ್ತೋರ್ವ ಆರೋಪಿ ಕಸ್ಟೋಡಿಯನ್ ವಾಹನದೊಳಗೆ ಕುಳಿತು ಚಾಲಕನಿಗೆ ಡೇರಿ ಸರ್ಕಲ್ ನತ್ತ ಚಲಾಯಿಸುವಂತೆ ಸೂಚಿಸಿದ್ದ ಎಂದು ಪೊಲೀಸ್ ಆಯುಕ್ತರು ವಿವರಿಸಿದ್ದಾರೆ.

# ಗದುಗಿನ ಆರ್ಬೂದ್ ಕೋ-ಆ ಬ್ಯಾಂಕ್‌ಗೆ 'ಉತ್ತಮ ಸಹಕಾರಿ ಬ್ಯಾಂಕ್' ಗೌರವ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸರ್ಕಾರದ ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳಗಳ ವತಿಯಿಂದ ಗದುಗಿನ ಪ್ರತಿಷ್ಠಿತ ಸಹಕಾರಿ ಬ್ಯಾಂಕ್‌ಗಳಲ್ಲಿ ಒಂದಾಗಿರುವ ದಿ. ಆರ್ಬೂದ್ ಕೋ-ಆಪರೇಟಿವ್ ಬ್ಯಾಂಕ್ ಲಿಮಿಟೆಡ್‌ನ್ನು 'ಉತ್ತಮ ಸಹಕಾರಿ ಬ್ಯಾಂಕ್' ಎಂದು ಗುರುತಿಸಿ ಗೌರವಿಸಿದೆ.

ಇತ್ತೀಚೆಗೆ ಹಾವೇರಿಯ ರಜನಿ ಸಭಾಂಗಣದಲ್ಲಿ ಜರುಗಿದ ಅಖಿಲ ಭಾರತ ಸಹಕಾರ ಸಪ್ತಾಹ-2025ರ 'ಆತ್ಮ ನಿರ್ಭರ ಭಾರತ ಸಾಧನೆಗೆ ವಾಹಕಗಳಾಗಿ ಸಹಕಾರ ಸಂಸ್ಥೆಗಳು' ಧ್ಯೇಯದ ಕಾರ್ಯಕ್ರಮದಲ್ಲಿ ಅತಿಥಿ ಗಣ್ಯಮಾನ್ಯರ ಉಪಸ್ಥಿತಿಯಲ್ಲಿ ಜರುಗಿದ ಕಾರ್ಯಕ್ರಮದಲ್ಲಿ ಬ್ಯಾಂಕ್‌ಗೆ ಗೌರವ ಸಲ್ಲಿಸಲಾಯಿತು.

ಆರ್ಬೂದ್ ಬ್ಯಾಂಕ್‌ನ ನಿರ್ದೇಶಕರಾದ ಆರ್.ಎಲ್. ಬಾಗಲಕೋಟಿ, ಎಂ.ಎ. ಹಣಗಿ ಹಾಗೂ ವ್ಯವಸ್ಥಾಪಕ ನಿರ್ದೇಶಕ ಎ.ಜಿ. ಯರಗುಡಿ ಗೌರವ ಸ್ವೀಕರಿಸಿದರು. ಆರ್ಬೂದ್ ಬ್ಯಾಂಕ್‌ಗೆ ಈ ಗೌರವವನ್ನು ನೀಡಿದ್ದಕ್ಕೆ ಇಲಾಖೆ, ಮಹಾಮಂಡಳಕ್ಕೆ ಬ್ಯಾಂಕ್‌ನ ಚೇರಮನ್ ಹಾಜಿ ಸರ್ಫರಾಜಅಹ್ಮದ ಎಸ್.ಉಮಚಗಿ ಅಭಿನಂದಿಸಿ ಕೃತಜ್ಞತೆ ಸಲ್ಲಿಸಿದ್ದಾರೆ.

# ಡಿ. 13ರಂದು ರಾಷ್ಟ್ರೀಯ ಲೋಕ ಅದಾಲತ್

▸▸ಮೊದಲನೇ ಪುಟದಿಂದ

ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾಜೀಗಾಗಿ ಗುರುತಿಸಲಾಗಿದೆ.

ವಿಶೇಷವಾಗಿ ಕರ್ನಾಟಕ ರಾಜ್ಯ ಸರ್ಕಾರದ ಆದೇಶದನ್ವಯ ಪೊಲೀಸ್ ಇಲಾಖೆ ಸಂಚಾರಿ ಇ-ಚಲನ್‌ದಲ್ಲಿ ದಾಖಲಾಗಿರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ. 50ರಷ್ಟು ರಿಯಾಯಿತಿ ಹಾಗೂ ಸಾರಿಗೆ ಇಲಾಖೆಯಲ್ಲಿ 1991-92ರಿಂದ 2019-20ರ ಅವಧಿಯಲ್ಲಿ ದಾಖಲಾಗಿ ಪಾವತಿಗೆ ಬಾಕಿ ಇರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ. 50ರಷ್ಟು ರಿಯಾಯಿತಿ ನೀಡಿ 21-11-2025ರಿಂದ 12-12-2025ರವರೆಗೆ ಕಾಲವಕಾಶವನ್ನು ನೀಡಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿಜೆಐ ಗವಾಯಿ ಅಧಿಕಾರಾವಧಿಯಲ್ಲಿ ಹಿಂದುಳಿದ ಜಾತಿಗಳ 21 ನ್ಯಾಯಾಧೀಶರ ನೇಮಕ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರ ಅಧಿಕಾರಾವಧಿಯಲ್ಲಿ ದೇಶದ ವಿವಿಧ ಹೈಕೋರ್ಟ್‌ಗಳಿಗೆ ಪರಿಶಿಷ್ಟ ಜಾತಿ ವರ್ಗದಿಂದ ಹತ್ತು ನ್ಯಾಯಾಧೀಶರು, ಹಿಂದುಳಿದ ವರ್ಗಗಳಿಂದ ಹನ್ನೊಂದು ಜನ ನ್ಯಾಯಾಧೀಶರನ್ನು ನೇಮಿಸಲಾಗಿದೆ.

ದೇಶದ ಮೊದಲ ಬೌದ್ಧ ಮತ್ತು ಎರಡನೇ ದಲಿತ ಸಿಜೆಐ ಆಗಿರುವ ನ್ಯಾಯಮೂರ್ತಿ ಗವಾಯಿ, ವಿವಿಧ ಹೈಕೋರ್ಟ್‌ಗಳ ನ್ಯಾಯಾಧೀಶರಾಗಿ ನೇಮಕಗೊಳ್ಳಲು ಸರ್ಕಾರಕ್ಕೆ 129 ಹೆಸರುಗಳನ್ನು ಶಿಫಾರಸು ಮಾಡಿದ ಸುಪ್ರೀಂ ಕೋರ್ಟ್‌ನ ಮೂವರು ಸದಸ್ಯರ ಕೊಲಿಜಿಯಂನ ನೇತೃತ್ವ ವಹಿಸಿದ್ದರು. ಅದರಲ್ಲಿ 93 ಹೆಸರುಗಳನ್ನು ತೆರವುಗೊಳಿಸಲಾಯಿತು.

ನ್ಯಾಯಮೂರ್ತಿಗಳಾದ ಎನ್.ವಿ. ಅಂಜಾರಿಯಾ, ವಿಜಯ್ ಬಿಷ್ಣೋಯ್, ಎ.ಎಸ್. ಚಂದೂರ್ಕರ್, ಅಲೋಕ್ ಆರಾಧೆ ಮತ್ತು ವಿಪುಲ್ ಮನುಭಾಯಿ ಪಂಚೋಲಿ ಅವರ ಅಧಿಕಾರಾವಧಿಯಲ್ಲಿ ಐವರು ನ್ಯಾಯಾಧೀಶರನ್ನು ಸಹ ಸುಪ್ರೀಂ ಕೋರ್ಟ್‌ಗೆ ನೇಮಿಸಲಾಯಿತು.

ನ್ಯಾಯಮೂರ್ತಿ ಗವಾಯಿ ಭಾರತದ ಮುಖ್ಯ ನ್ಯಾಯಮೂರ್ತಿಯಾದ ಮೇ 14 ರಿಂದ ಸುಪ್ರೀಂ ಕೋರ್ಟ್‌ನ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲಾದ ನ್ಯಾಯಾಧೀಶರ ನೇಮಕಾತಿಯ ವಿವರಗಳ ಪ್ರಕಾರ, ಹೈಕೋರ್ಟ್‌ಗೆ ಸರ್ಕಾರವು ಅನುಮೋದಿಸಿದ 93 ಹೆಸರುಗಳಲ್ಲಿ ಅಲ್ಪಸಂಖ್ಯಾತ ಸಮುದಾಯಗಳ 13 ನ್ಯಾಯಾಧೀಶರು ಮತ್ತು 15 ಮಹಿಳಾ ನ್ಯಾಯಾಧೀಶರು ಸೇರಿದ್ದಾರೆ.

### ಕೆ.ಜಿ. ಹಳ್ಳಿ ಕುಟುಂಬಗಳು ಬೀದಿಪಾಲು; ವೆಲ್ಫೇರ್ ಪಾರ್ಟಿ ಆಕ್ರೋಶ

# ಕ್ಷೇತ್ರದ ಶಾಸಕರ ಮೌನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನ. 3ರಂದು ನಗರದ ಮಧ್ಯ ಭಾಗದ ಕೆ.ಜಿ. ಹಳ್ಳಿಯಲ್ಲಿ ರೈಲ್ವೆ ಇಲಾಖೆ ವತಿಯಿಂದ ಜೆಸಿಬಿಗಳ ಮೂಲಕ 30ಕ್ಕಿಂತ ಹೆಚ್ಚು ಮನೆಗಳನ್ನು ನೆಲಸಮ ಮಾಡಿ ನೂರಕಕ್ಕೂ ಹೆಚ್ಚು ಕುಟುಂಬಗಳನ್ನು ಬೀದಿಗೆ ತಳ್ಳಲಾಗಿದೆ. ಈ ಬಗ್ಗೆ ಕ್ಷೇತ್ರದ ಶಾಸಕರು ಮೌನವಾಗಿದ್ದು, ಯಾವುದೇ ನೆರವು ನೀಡುತ್ತಿಲ್ಲ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ರಾಜ್ಯಾಧ್ಯಕ್ಷ ಅಡ್ವೊಕೇಟ್ ತಾಹೇರ್ ಹುಸೇನ್ ಕಳವಳ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಇಲ್ಲಿನ ನಿವಾಸಿಗಳ ಪ್ರಕಾರ, ಸರಕಾರವೇ ಸ್ಲಮ್ ಬೋರ್ಡ್ ಅಡಿಯಲ್ಲಿ ಮನೆಗಳನ್ನು ಮಂಜೂರು ಮಾಡಿದ್ದು,



ಈ ಬಗ್ಗೆ ನಿವಾಸಿಗಳು ಮಾನ್ಯವಾದ ದಾಖಲೆಗಳನ್ನು ಹೊಂದಿದ್ದಾರೆ. ಸರಿಯಾದ ಸೂಚನೆ ಅಥವಾ ಪುನರ್ವಸತಿ ಕ್ರಮಗಳಿಲ್ಲದೆ ಧ್ವಂಸ ಕಾರ್ಯಾಚರಣೆಗಳು ನಡೆದಿದ್ದು, ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ.

ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ರಾಜ್ಯ ನಿಯೋಗ ಈ ಪ್ರದೇಶಕ್ಕೆ ಭೇಟಿ ನೀಡಿ ಪೀಡಿತ ಜನರ ಅಹವಾಲು ಕೇಳಿ ಒಗ್ಗಟ್ಟನ್ನು ವ್ಯಕ್ತಪಡಿಸಿದೆ. ಇದು ದಶಕಗಳಿಂದ ಈ ಪ್ರದೇಶದಲ್ಲಿ ವಾಸಿಸುತ್ತಿರುವ ಬಡ ಮತ್ತು ಕಾರ್ಮಿಕ ವರ್ಗದ ಕುಟುಂಬಗಳ ಮೇಲಿನ ಕ್ರೂರ ದಾಳಿ ಎಂದು ಹೇಳಿದ್ದು, ಸರಕಾರ ತಕ್ಷಣ ಈ ಕುಟುಂಬಗಳಿಗೆ ಪುನರ್ವಸತಿ ಮತ್ತು ನ್ಯಾಯಯುತ ಪರಿಹಾರವನ್ನು ಒದಗಿಸಬೇಕು ಎಂದು ಒತ್ತಾಯಿಸಿದ್ದಾರೆ.

ಭೇಟಿಯ ಸಂದರ್ಭದಲ್ಲಿ ಪಕ್ಷದ ರಾಜ್ಯ ಉಪಾಧ್ಯಕ್ಷ ಹಬೀಬುಲ್ಲಾ ಖಾನ್, ಪ್ರಧಾನ ಕಾರ್ಯದರ್ಶಿ ರಿಯಾಜ್ ಅಹ್ಮದ್, ಮುಖಂಡರಾದ ಸೈಯದ್ ಇರ್ಫಾನ್ ಇತರರು ಇದ್ದರು.

### 'ಜಿಲ್ಲಾ ಮಟ್ಟದ ಏಕತಾ ಪಾದಯಾತ್ರೆ'ಯಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ ಅಭಿಮತ

# ಸರ್ದಾರ್ ಪಟೇಲರು ಏಕೀಕರಣದ ರೂವಾರಿ



ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಸರ್ದಾರ್ ವಲ್ಲಭಬಾಯಿ ಪಟೇಲರು ಇಂಗ್ಲೆಂಡ್‌ಗೆ ಹೋಗಿ ಕಾನೂನು ಪದವಿ ಪಡೆದು, ಐಷಾರಾಮಿ ಜೀವನ ನಡೆಸಬಹುದಿತ್ತು. ಆದರೆ, ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟಕ್ಕೆ ಧುಮುಕಿದರು. ರೈತರ ಹೋರಾಟದ ನೇತೃತ್ವ ವಹಿಸಿ ಯಶಸ್ಸು ಕಂಡ ವಲ್ಲಭಾಯಿ ಪಟೇಲರು ಉಕ್ಕಿನ ಮನುಷ್ಯ ಎಂದೇ ಪ್ರಸಿದ್ಧಿ ಹೊಂದಿದರು ಎಂದು ಹೇಳಿದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ನಮ್ಮ ದೇಶದ ಐಕ್ಯತೆ ಹಾಗೂ ಏಕೀಕರಣಕ್ಕೆ ಹೋರಾಟ ಮಾಡಿದ ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಬಾಯಿ ಪಟೇಲರು ಎಂದು ವಿಧಾನಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ಗದಗ ನಗರದ ವಿಠಲಾರೂಢ ಕಲ್ಯಾಣ ಮಂಟಪದಲ್ಲಿ ಯುವ ಕಾರ್ಯ ಮತ್ತು ಕ್ರೀಡಾ ಸಚಿವಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಕೋಶಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಏಕತಾ ಪಾದಯಾತ್ರೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

1947ರ ಸ್ವಾತಂತ್ರ್ಯಾನಂತರ ದೇಶಾದಲ್ಲಿ ಹರಿದು ಹಂಚಿ ಹೋಗಿದ್ದ 500ಕ್ಕೂ ಹೆಚ್ಚು ಸಂಸ್ಥಾನಗಳನ್ನು ಒಂದೇ ಒಕ್ಕೂಟದ ವ್ಯವಸ್ಥೆಗೆ ತರಲು ಸರ್ದಾರ್ ವಲ್ಲಭಬಾಯಿ ಪಟೇಲರು ಶ್ರಮಿಸಿದರು. ಅವರ ನಿರಂತರ ಶ್ರಮದ ಫಲವಾಗಿ ದೇಶವು ಒಕ್ಕೂಟ ವ್ಯವಸ್ಥೆಯಡಿ ಬರಲು ಸಾಧ್ಯವಾಯಿತು. ದೇಶಾದ್ಯಂತ 3 ಸಾವಿರಕ್ಕೂ ಹೆಚ್ಚು ಜಾತಿಗಳು, 25 ಸಾವಿರಕ್ಕೂ ಹೆಚ್ಚು ಉಪಜಾತಿಗಳಿದ್ದರೂ ಎಲ್ಲರಲ್ಲಿಯೂ ಒಗ್ಗಟ್ಟಿನ ಮನೋಭಾವನೆ ಬೆಳೆಸಬೇಕು, ಅದಕ್ಕೆ ಉತ್ತೇಜನ ಕೊಡಬೇಕು ಎಂಬ ನಿಟ್ಟಿನಲ್ಲಿ ಶ್ರಮಿಸಿದ ವಲ್ಲಭಬಾಯಿ ಪಟೇಲರಿಗೆ ಮಹಾತ್ಮ ಗಾಂಧೀಜಿ ಅವರು ಸರ್ದಾರ್ ಎಂದು ಬಿರುದನ್ನು ನೀಡಿದರು ಎಂದು ಸ್ಮರಿಸಿದರು.

ಯುವಕರಲ್ಲಿ ದೇಶಪ್ರೇಮ, ದೇಶಭಕ್ತಿ ಹೆಚ್ಚಿಸಬೇಕು, ಸ್ವಾವಲಂಬನೆಯ ಮನೋಭಾವನೆಯ ಜೊತೆಗೆ ಸಾಮಾಜಿಕ ಜವಾಬ್ದಾರಿಯ ತಿಳಿವಳಿಕೆ ನೀಡಲು ಪ್ರಧಾನಿ ನರೇಂದ್ರ ಮೋದಿ ಅವರು ಸರ್ದಾರ್ ವಲ್ಲಭಬಾಯಿ ಪಟೇಲರ 150ನೇ ಜನ್ಮದಿನದ ಅಂಗವಾಗಿ ದೇಶಾದ್ಯಂತ 'ಒಂದೇ ಭಾರತ, ಆತ್ಮನಿರ್ಭರ ಭಾರತ' ಏಕತಾ ನಡಿಗೆಯನ್ನು ಹಮ್ಮಿಕೊಂಡಿದ್ದಾರೆ ಎಂದು ಹೇಳಿದರು.

ನಗರದ ಮುಳಗುಂದ ನಾಕಾ ಬಳಿಯ ವಿಠಲಾರೂಢ ಕಲ್ಯಾಣ ಮಂಟಪದಿಂದ ಆರಂಭವಾದ ಜಿಲ್ಲಾ ಮಟ್ಟದ ಏಕತಾ ನಡಿಗೆಯು ಮುಳಗುಂದ ನಾಕಾ, ಜೋಡ ಮಾರುತಿ ದೇವಸ್ಥಾನ, ಹತ್ತಿಕಾಳ ಕೂಟ, ಬಸವೇಶ್ವರ ವೃತ್ತ, ಮಹೇಂದ್ರಕರ್ ವೃತ್ತ ಮಾರ್ಗವಾಗಿ ಮಹಾತ್ಮ ಗಾಂಧಿ ವೃತ್ತದಲ್ಲಿ ಸಮಾರೋಪಗೊಂಡಿತು.




ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಏಕತಾ ನಡಿಗೆ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಡಿವೈಎಸ್‌ಪಿ ಮುರ್ತುಜಾ ಖಾದ್ರಿ, ಮೈ ಭಾರತ ಕೇಂದ್ರದ ಉಪನಿರ್ದೇಶಕ ಲೋಕೇಶ ಕುಮಾರ, ರಾಷ್ಟ್ರೀಯ ಸೇವಾ ಯೋಜನೆಯ ನೋಡಲ್ ಅಧಿಕಾರಿ ವಿ.ಎಚ್. ಕೊಳ್ಳಿ, ಶ್ರೀನಿವಾಸ ಬಡಿಗೇರ, ರಾಜು ಕುರಡಗಿ, ಅಭಿಯಾನದ ಜಿಲ್ಲಾ ಸಂಚಾಲಕ ಆರ್.ಕೆ. ಚವ್ಹಾಣ, ಸಂತೋಷ ಅಕ್ಕಿ, ಲಿಂಗರಾಜ ಪಾಟೀಲ, ಫಕೀರೇಶ ರಟ್ಟಿಹಳ್ಳಿ, ರಮೇಶ ಸಜ್ಜಗಾರ, ನಗರಸಭೆ ಸದಸ್ಯ ರಾಘವೇಂದ್ರ ಯಳವತ್ತಿ, ವಿಜಯಲಕ್ಷ್ಮೀ ಮಾನ್ವಿ, ಸ್ವಾತಿ ಅಕ್ಕಿ ಸೇರಿದಂತೆ ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

## ಯೋಗಿರಾಜ ಮಹಾರಾಜರ ಪುಣ್ಯಾರಾಧನೆ ಸಂಪನ್ನ



**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಕಳೆದ ಮೂರು ದಿನಗಳಿಂದ ಇಲ್ಲಿಯ ವಿದ್ಯಾಶಂಕರ ದೇವಸ್ಥಾನದಲ್ಲಿ ನಡೆದ ಯೋಗಿರಾಜ ಮಹಾರಾಜರ ಪುಣ್ಯಾರಾಧನೆ ಕಾರ್ಯಕ್ರಮವು ಹಲವು ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ಸಂಪನ್ನಗೊಂಡಿತು.

ಬೆಳಿಗ್ಗೆ ಕಾಕಡಾರತಿಯೊಂದಿಗೆ ವಿದ್ಯಾಶಂಕರ, ಯೋಗಿರಾಜರ ಮೂರ್ತಿಗೆ ಲಘು ಅಭಿಷೇಕ ಜರುಗಿ-ತು. ನಂತರ ಭಕ್ತ ಮಂಡಳಿಯು ಗ್ರಾಮದ ಬ್ರಾಹ್ಮಣರ ಮನೆಗೆ ತೆರಳಿ ಭೀಮಭಿಕ್ಷೆಯನ್ನು ನಡೆಸಿದರು. ನಂತರ ಸತ್ಯನಾರಾಯಣ ಪೂಜೆ ನೆರವೇರಿತು.

ಯೋಗಿರಾಜರ ಭಾವಚಿತ್ರವನ್ನು ಪಾಲಕಿಯಲ್ಲಿ ಅವಭೃತ ಸ್ನಾನದೊಂದಿಗೆ ವಿದ್ಯಾಶಂಕರ ದೇಗುಲಕ್ಕೆ ತರಲಾಯಿತು. ಈ ಸಂದರ್ಭದಲ್ಲಿ ಸಾಲಾಗಿ ಮಲಗಿ ತಮ್ಮ ಭಕ್ತಿಯ ಸಂಕಲ್ಪವನ್ನು ಸಮರ್ಪಿಸಿಕೊಂಡ ಭಕ್ತರನ್ನು ದಾಟಿ ಪಾಲಕಿಯು ಗರ್ಭಗುಡಿಯನ್ನು ಪ್ರವೇಶಿಸಿತು.

ನರೇಗಲ್ಲದ ವೆಂಕಟೇಶ ಕುಲಕರ್ಣಿ, ಹುಬ್ಬಳ್ಳಿಯ ಆಕಾಶವಾಣಿ ಕಲಾವಿದ ಎಸ್.ಆರ್. ಅಂಬೇಕರ್ ಅವರ ಭಕ್ತಿ ಸಂಗೀತ ಕಾರ್ಯಕ್ರಮವು ಮನ ಸೆಳೆಯಿತು. ಇವರಿಗೆ ಮಾಲತಿ ಕುಲಕರ್ಣಿ, ಉಮೇಶ ಪಾಟೀಲ ಅವರು ಸಂಗೀತ ಸೇವೆ ನೀಡಿದರು. ವಿಶ್ವನಾಥ ಕುಲಕರ್ಣಿಯವರ ರಾಜ ನೀತಿಯ ಕುರಿತ ಗಮಕ ವಾಚನವು ಮನ ತಣಿಸಿತು. ಇದಕ್ಕೂ ಪೂರ್ವ ಗದಗ ಮಹಾಲಕ್ಷ್ಮೀ ಮಹಿಳಾ ಭಜನಾ ಮಂಡಳದಿಂದ ಕೋಲಾಟ, ಭಜನೆ ನಡೆಯಿತು. ಶಿಕ್ಷಕಿ ಭಾಗ್ಯಶ್ರೀ ಘಳಗಿಯವರು ರಚಿಸಿದ 'ಹೆಳವನಕಟ್ಟೆಯ ಗಿರಿಯಮ್ಮ' ಎಂಬ ಧಾರ್ಮಿಕ ನಾಟಕವು ಆಕರ್ಷಿಸಿತು.

ಭಕ್ತ ಮಂಡಳಿಯ ಆರ್.ಡಿ. ದೇಸಾಯಿ, ನಾಗರಾಜ ಜಿ.ಕುಲಕರ್ಣಿ, ದತ್ತಣ್ಣ ಜೋಶಿ, ಅಶೋಕ ಜೋಶಿ, ಆರ್.ಜಿ. ಕುಲಕರ್ಣಿ, ಆರ್.ವಿ. ಘಳಗಿ, ಜಿ.ಜಿ. ಕುಲಕರ್ಣಿ, ಶಂಕರ ಜೋಶಿ, ಶ್ರೀಕಾಂತ ದೇಸಾಯಿ, ಶ್ರೀರಂಗ ದೇಸಾಯಿ, ಎನ್.ಜಿ. ಕುಲಕರ್ಣಿ, ಗೋಪಾಲ ಜೋಶಿ ಇತರರು ಪಾಲ್ಗೊಂಡಿದ್ದರು.

### ಬಳಗಾನೂರಿನ ಐತಿಹಾಸಿಕ ಸ್ಮಾರಕಗಳು ಅಳಿವಿನ ಅಂಚಿನಲ್ಲಿ

# ಕಾಲಗರ್ಭ ಸೇರುವ ಮುನ್ನ ರಕ್ಷಣೆಯಾಗಲಿ

**■ವಿಜಯಸಾಕ್ಷಿ ಸುದ್ದಿ, ರಾಯಚೂರು**

ಇತಿಹಾಸವೆಂದೊಡನೆ ನಮ್ಮ ಅಕ್ಷಿಪಟಲದ ಮೇಲೆ ರಾಜ-ಮಹಾರಾಜರ ಶೌರ್ಯ, ಸಾಹಸಗಳು ಸಿಂಹದಂತೆ ಘರ್ಜಿಸುತ್ತಿದ್ದರೂ ಕಲಾ ಪ್ರೌಢಿಮೆಗೆ ಕರಗುವ ಮೃದುವಾದ ಮನಸ್ಸು, ಪ್ರೀತಿಗಾಗಿ ಬೆಲೆ ಕಟ್ಟಲಾಗದ ಭವ್ಯ ಮಹಲುಗಳ ಅರ್ಪಣೆ, ಕಲೆಯನ್ನು ಬೆಳೆಸಿದ ಅವರ ಹೃದಯ ಶ್ರೀಮಂತಿಕೆ ಗೋಚರವಾಗುತ್ತದೆ. ಅವರು ಅಂದು ರಕ್ತ, ಬೆವರು, ಹಣದ ಹೊಳೆಯನ್ನೇ ಹರಿಸಿ ನಿರ್ಮಿಸಿದ ನೂರಾರು ಸ್ಮಾರಕಗಳನ್ನು ಇಂದು ನಮ್ಮಿಂದ ರಕ್ಷಿಸಿಕೊಳ್ಳಲಾಗುತ್ತಿಲ್ಲವಲ್ಲ ಎಂಬುದೊಂದೇ ಅಳಲು.



ಇಂತಹ ಅಳಿವಿನ ಅಂಚಿನಲ್ಲಿರುವ ಸ್ಮಾರಕಗಳ ಪಟ್ಟಿಗೆ ಪುರಾತನ ಕಾಲದಲ್ಲಿ ಎಡೆದೊರೆ 2000 ನಾಡಿನ ಮೊರಟ 300 ವಿಭಾಗದ (ಈಗಿನ ಸಿರಿವಾರ ತಾಲೂಕಿನ ಮಲ್ಲಟ ಗ್ರಾಮ) ಬಳಗಾನೂರು ಗ್ರಾಮದ ಬ್ರಾಹ್ಮಣರಿಗೆ ದತ್ತಿ ನೀಡಲಾದ ಸರ್ವನಮಸ್ಯದ ಅಗ್ರಹಾರವಾಗಿದ್ದ ಪಿರಿಯ ಬಳೆಗಾರನೂರೆಂದೇ ಪ್ರಚಲಿತದಲ್ಲಿತ್ತು.

ಈ ಊರು ನಂತರದ ದಿನಗಳಲ್ಲಿ ರಾಯಚೂರು ದೋ-ಆಬ್ ಪ್ರದೇಶಕ್ಕೆ ಸೇರಿತು. ಬಳಗಾನೂರು ಗ್ರಾಮವನ್ನು ಕಲ್ಯಾಣ ಚಾಲುಕ್ಯರು, ಕಲಚೂರಿಯರು, ಸೇವುಣರು, ವಿಜಯನಗರದ ಅರಸರು, ಬಹುಮನಿ ಸುಲ್ತಾನರ ರಾಜರುಗಳ ಆಡಳಿತಕ್ಕೊಳಪಟ್ಟಿದ್ದ 22 ಅಗ್ರಹಾರಗಳಲ್ಲಿ ಒಂದಾಗಿತ್ತು.

ಬಳಗಾನೂರು ಕಳಚೂರಿಯರ ಮನೆತನದ ರಾಯಮುರಾರಿ ಸೋವಿದೇವನ ಆಳ್ವಿಕೆಯಲ್ಲಿ ಒಳಪಟ್ಟ ಈ ಬಳಗಾನೂರು ಅಂದು ಸಕಲ ಸಿರಿ-ಸಂಪತ್ತಿನಿಂದ ರಾರಾಜಿಸುತ್ತ ತನ್ನದೇ ಆದ ಐತಿಹಾಸಿಕ ಹಿನ್ನೆಲೆಯನ್ನು ಹೊಂದಿದೆ.

ತೋಟದ ಯಲ್ಲಮ್ಮ ದೇವಸ್ಥಾನ ಜಿಲ್ಲೆಯಲ್ಲಿಯೇ ಶಿಲಾಶಾಸನವುಳ್ಳ ಏಕೈಕ ತೋಟದ ಯಲ್ಲಮ್ಮ ದೇವಸ್ಥಾನ ಊರ ಹೊರವಲಯದಲ್ಲಿದ್ದು, ಇದರ ಮುಂಭಾಗದಲ್ಲಿ ಶಕ್ತಿ ಶಾಸನೋಕ್ತ ಗರ್ಭಗೃಹದಲ್ಲಿ ಯಲ್ಲಮ್ಮ ದೇವಿಯ ಮೂರ್ತಿಯಿದೆ ಹಾಗೂ 12ನೇ ಶತಮಾನಕ್ಕೆ ಸೇರಿದ ನವರಂಗವಿದೆ.

ಕ್ರಿ.ಶ 1175ರಲ್ಲಿ ಕಳಚೂರಿ ಅರಸ ರಾಯಮುರಾರಿ ಸೋವಿ ದೇವನ ಆಳ್ವಿಕೆಯಲ್ಲಿ, ವಡ್ಡವ್ಯವಹಾರಿಯಾಗಿದ್ದ ಸಬ್ಬದೇವಶೆಟ್ಟಿ ಎಂಬ ವರ್ತಕ ಈ ಲಕ್ಷ್ಮೀನಾರಾಯಣ ದೇವಸ್ಥಾನವನ್ನು ಕಟ್ಟಿಸಿದ. ಇದು ವೇಸರ ಶೈಲಿಯಲ್ಲಿರುವ ಏಕಕೂಟ ವೈಷ್ಣವ ದೇವಸ್ಥಾನದ ಗರ್ಭಗುಡಿಯಲ್ಲಿ ನಾರಾಯಣ ತನ್ನ ಎಡತೊಡೆಯ ಮೇಲೆ ಲಕ್ಷ್ಮೀದೇವಿಯನ್ನು ಕೂಡಿಸಿಕೊಂಡಿರುವ ಕಪ್ಪುಶಿಲೆಯ ವಿಗ್ರಹವಿದೆ. ಇದು ಭಾರತದಲ್ಲಿಯೇ ಎರಡನೆಯದೆನ್ನಬಹುದಾದ ಅಪರೂಪದ ದಕ್ಷಿಣಾಭಿ ಲಕ್ಷ್ಮೀನಾರಾಯಣ ದೇವಸ್ಥಾನವೆಂದು ಹೇಳಲಾಗುತ್ತದೆ.

ಮಾರುತಿ ದೇವಸ್ಥಾನ ದಕ್ಷಿಣಾಭಿಮುಖವಾಗಿದ್ದು, ವಿಶೇಷವೆಂಬಂತೆ ಮಾರುತಿ ದೇವರ ಕೈಯಲ್ಲಿ ತ್ರಿಶೂಲವಿರುವುದನ್ನು ಕಾಣಬಹುದು. ಅದೇ ರೀತಿ ವೀರಭದ್ರೇಶ್ವರ ದೇವಾಲಯ ಉತ್ತರಾಭಿಮುಖವಾಗಿದೆ. ಗರ್ಭಗೃಹದಲ್ಲಿ ನಿಂತ ಭಂಗಿಯ ಕಪ್ಪು ಶಿಲೆಯ ವೀರಭದ್ರೇಶ್ವರ ವಿಗ್ರಹವಿದೆ. ನಗರೇಶ್ವರ ದೇವಾಲಯದ ಹತ್ತಿರದಲ್ಲಿ ಕ್ರಿ.ಶ 11 ಮತ್ತು 12ನೇ ಶತಮಾನದ ಎರಡು ತ್ರುಟಿತ ಜೈನ ತೀರ್ಥಂಕರರ ವಿಗ್ರಹಗಳು, ತ್ರುಟಿತ ಶಾಸನೋಕ್ತ ಮನೋಹರ ಚನ್ನಕೇಶವ ವಿಗ್ರಹ, ನವ ಶಿಲಾಯುಗ ಕಾಲದ ಮಾನವರು ವಾಸಮಾಡಿದ ಬೂದಿದಿಬ್ಬ, ನಾಗಭೂಷಣ ದೇವಾಲಯವಿದೆ.

ಐತಿಹಾಸಿಕ ಕುರುಹುಗಳಾಗಿರುವ ಮಂದಿರಗಳು ಜನರ ತಾತ್ಸಾರದಿಂದ ದನದ ಕೊಟ್ಟಿಗೆಗಳಾಗಿ, ತಿಪ್ಪೆಗುಂಡಿಗಳಾಗಿ ವಿರೂಪಗೊಂಡು ತಿಪ್ಪೆಯಲ್ಲಿಟ್ಟ ವಜ್ರದಂತಾಗಿದೆ. ಆದರೂ ಚಳಿ, ಗಾಳಿ, ಮಳೆಗಳಿಗೆ ಮೈಯೊಡ್ಡಿ ನಿಂತಿರುವ ಈ ದೇವಾಲಯಗಳು ಜೀರ್ಣೋದ್ಧಾರವಾದೀತೆ ಎಂದು ಕಾದು ಕುಳಿತಿವೆ. ಈ ಭಾಗದ ಜನ, ಜನಪ್ರತಿನಿಧಿಗಳು, ಪುರಾತತ್ವ ಇಲಾಖೆ ಸುಮ್ಮನೆ ಕುಳಿತರೆ ಮುಂದಿನ ಪೀಳಿಗೆಗೂ ಪೂರ್ವಜರ ಕಲಾಸಿರಿ ಕಳಚೂರಿಯರ ಕೊಂಡಿ ಕಳಚಿ ಕಾಲಗರ್ಭ ಸೇರುವ ಮುನ್ನ ರಕ್ಷಿಸಿ ಬಳುವಳಿಯಾಗಿ ಬಿಟ್ಟು ಹೋಗುವ ಕಾರ್ಯ ಆಗಬೇಕಿದೆ.

## ರೈತರಿಂದ ವಿನೂತನ ಪ್ರತಿಭಟನೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮೆಕ್ಕೆಜೋಳದ ಬೆಂಬಲ ಬೆಲೆ ಖರೀದಿ ಕೇಂದ್ರ ತೆರೆಯುವಂತೆ ಆಗ್ರಹಿಸಿ ವಿವಿಧ ರೈತಪರ ಸಂಘಟನೆಗಳ ಆಶ್ರಯದಲ್ಲಿ ನಡೆಯುತ್ತಿರುವ ಅಹೋರಾತ್ರಿ ಧರಣಿ ಸತ್ಯಾಗ್ರಹ ಶನಿವಾರ 8ನೇ ದಿನಕ್ಕೆ ಕಾಲಿಟ್ಟಿದ್ದು, ಶನಿವಾರ ಧರಣಿ ನಿರತ ರೈತರು ಪಾಳಾ-ಬಾದಾಮಿ ರಸ್ತೆಯಲ್ಲಿ ಕುಳಿತು ಜೋಳದ ರೊಟ್ಟಿ ಊಟ ಮಾಡಿದರು.

ಪಟ್ಟಣದ ಹಳ್ಳದಕೇರಿ ಓಣಿಯ ನಾಗಪ್ಪ ಓಂಕಾರಿ, ಈರಪ್ಪ ಮಾಗಡಿ, ದುಂಡಪ್ಪ ಕೊಟಗಿ, ದೇವಪ್ಪ ಕರಿಯತ್ತಿನ, ಕೊಟ್ಟಪ್ಪ ಅಮರಶೆಟ್ಟಿ, ಶಿವನಗೌಡ ಅಡರಕಟ್ಟಿ, ದ್ಯಾಮಣ್ಣ ಕಮತದ, ಗಿರಿಜವ್ವ ಕರಿಯತ್ತಿನ, ಪ್ರೇಮವ್ವ ಹರಪನಹಳ್ಳಿ ಇವರು ಜೋಡೆತ್ತಿನ ಎರಡು ಚಕ್ಕಡಿಯಲ್ಲಿ ಜೋಳದ ಕಡಕ್ ರೊಟ್ಟಿ, ಬುತ್ತಿ, ಮಡಿಕಿ ಕಾಳು ಪಲ್ಯ, ಶೇಂಗಾ ಚಟ್ನಿ ಕಟ್ಟಿಕೊಂಡು ಧರಣಿನಿರತ ವೇದಿಕೆಗೆ ಆಗಮಿಸಿದ್ದರು.

ನಂತರ ನಡು ರಸ್ತೆಯಲ್ಲೇ ತಾಡಪತ್ರಿ ಹಾಸಿಕೊಂಡು ಸಾಲಾಗಿ ಕುಳಿತು ರೈತರು ಊಟ ಮಾಡುವ ಮೂಲಕ ವಿನೂತನ ಪ್ರತಿಭಟನೆ ನಡೆಸಿದರು. ರೈತರ ಊಟ ಮುಗಿಯುವವರೆಗೆ ಅರ್ಧ ತಾಸು ರಾಜ್ಯ ಹೆದ್ದಾರಿ ಸಂಚಾರ ಬಂದ್ ಆಗಿತ್ತು.

ಪಟ್ಟಣ ಹಾಗೂ ಬೇರೆ ಬೇರೆ ಊರುಗಳಿಂದ ಬಂದಿದ್ದ ರೈತರು, ಕಾಲೇಜು ವಿದ್ಯಾರ್ಥಿಗಳು, ಸಾರ್ವಜನಿಕರು ಖಡಕ್ ರೊಟ್ಟಿ ಊಟ ಮಾಡಿದ್ದು ವಿಶೇಷವಾಗಿತ್ತು. ಚಂಬಣ್ಣ ಬಾಳಿಕಾಯಿ, ಸಿ.ಆರ್. ಲಕ್ಕುಂಡಿಮಠ, ಶರಣು ಗೋಡಿ, ಬಸವರಾಜ ಹಿರೇಮನಿ, ಸೋಮಣ್ಣ ಡಾಣಗಲ್ಲ, ವೀರಣ್ಣ ಪವಾಡದ, ಅಮರೇಶ ತೆಂಬದಮನಿ, ಜ್ಞಾನದೇವ ಬೋಮಲೆ, ಅಭಯ ಜೈನ್, ಪವನ್ ಬಂಕಾಪೂರ ಮತ್ತಿತರರು ಇದ್ದರು.

ಲಕ್ಷ್ಮೇಶ್ವರದಲ್ಲಿ ಖರೀದಿ ಕೇಂದ್ರ ಪ್ರಾರಂಭಿಸುವವರೆಗೂ ಅಹೋರಾತ್ರಿ ಹೋರಾಟ ನಡೆಯಲಿದೆ ಎಂದು ಹೋರಾಟದ ನೇತೃತ್ವ ವಹಿಸಿರುವ ಮಂಜುನಾಥ ಮಾಗಡಿ, ನಾಗರಾಜ ಚಿಂಚಲಿ, ಎಂ.ಎಸ್. ದೊಡ್ಡಗೌಡ್ರ, ರವಿಕಾಂತ ಅಂಗಡಿ ತಿಳಿಸಿದ್ದಾರೆ.

## ಮೆಕ್ಕೆಜೋಳ ಖರೀದಿ ಕೇಂದ್ರ ತೆರೆಯಲು ರಾಜ್ಯ ಸರ್ಕಾರ ಆದೇಶ ಆದೇಶ ನೀಡಿರುವುದು ಸ್ವಾಗತಾರ್ಹ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಸರ್ಕಾರ ರೈತರಿಂದ 10 ಲಕ್ಷ ಮೆಟ್ರಿಕ್ ಟನ್ ಮೆಕ್ಕೆ ಜೋಳವನ್ನು 2400 ರೂ ಬೆಲೆಯಲ್ಲಿ ಖರೀದಿ ಕೇಂದ್ರವನ್ನು ತೆರೆಯುವಂತೆ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಅಕ್ಟೋಬರ್ 31ರಂದು ಗದುಗಿನ ವಿಜಯಸಾಕ್ಷಿ ದಿನಪತ್ರಿಕೆ ಈ ಕುರಿತು ವರದಿ ಪ್ರಕಟಿಸಿತ್ತು. ಸರಕಾರ ಕೂಡಲೇ ಮೆಕ್ಕೆ ಜೋಳ ಖರೀದಿ ಕೇಂದ್ರ ತೆರೆಯಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವಿ.ಆರ್. ನಾರಾಯಣರೆಡ್ಡಿ ಬಣದ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ವಿಜಯಸಾಕ್ಷಿ ಪತ್ರಿಕೆ ಮೂಲಕ ಆಗ್ರಹಿಸಿದ್ದರು.


ವಿಜಯ ಸಾಕ್ಷಿ
www.vijayasakshi.com
ಸಂಕಷ್ಟದಲ್ಲಿ ರೈತರು
ಮೆಕ್ಕೆಜೋಳ ಬೆಳೆಗಾರರು ಕಂಗಾಲು
■ವಿಜಯಸಾಕ್ಷಿ ಸುದ್ದಿ, ಗದಗ

ಇಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಕ್ಯಾಬಿನೆಟ್ ಮೀಟಿಂಗ್‌ನಲ್ಲಿ ಮಹತ್ವದ ಆದೇಶ ನೀಡಿದ್ದು, ರಾಜ್ಯದ ಎಲ್ಲಾ ರೈತರಿಗೂ ಸಂತಸ ತಂದಿದೆ. ಈ ಆದೇಶ ನೀಡಿರುವುದು ಸ್ವಾಗತಾರ್ಹ ಎಂದು ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ತಿಳಿಸಿದ್ದಾರೆ.

## 'ಶರಣ ಸಂಗಮ' ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ನ. 23ರಂದು ಬೆಳಿಗ್ಗೆ 10 ಗಂಟೆಗೆ ನಡೆಯಲಿರುವ ಬಸವದಳದ 1673ನೇ ಶರಣ ಸಂಗಮದಲ್ಲಿ 'ಬಸವಾದಿ ಶರಣರ ವಚನಗಳಲ್ಲಿ ಜೀವನ ಮೌಲ್ಯ' ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಹಿರಿಯರಾದ ಶರಣ ಎಸ್.ಎನ್. ಹಕಾರಿ, ವಹಿಸುವರು. ಶರಣತತ್ವ ಚಿಂತಕ ಎಂ.ಬಿ. ಲಿಂಗದಾಳ ಉಪನ್ಯಾಸ ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.


ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕು ಎಂದು ಗಜೇಂದ್ರಗಡದಲ್ಲಿ ನಡೆಯುತ್ತಿದ್ದ ಹಕ್ಕೊತ್ತಾಯದ ವೇಳೆ ತಾಲೂಕಿನ ಮಾರನಬಸರಿ ಗ್ರಾಮದ ಕಾಂಗ್ರೆಸ್ ಕಾರ್ಯಕರ್ತ ರವಿ ಗಡಾದ ಹಾಗೂ ದಿಂಡೂರ ಗ್ರಾಮದ ಕಾಂಗ್ರೆಸ್ ಕಾರ್ಯಕರ್ತ ಸಂಗಪ್ಪ ತೇಜಿ ಮೈಮೇಲೆ ಡಿಸೇಲ್ ಸುರಿದುಕೊಂಡು ಪ್ರತಿಭಟಿಸಿದಾಗ ಸ್ಥಳದಲ್ಲಿದ್ದ ಪೊಲೀಸರು ಹಾಗೂ ಕೆಲ ಕಾಂಗ್ರೆಸ್ ಕಾರ್ಯಕರ್ತರು ಅವರನ್ನು ತಡೆದರು.



## ಜಾನುವಾರು ಕಳ್ಳತನ: ಇಬ್ಬರು ನ್ಯಾಯಾಂಗ ವಶಕ್ಕೆ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶುಕ್ರವಾರ ತಡರಾತ್ರಿ ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಹೊರವಲಯದ ನೆಲೋಗಲ್ ಕ್ರಾಸ್ ಹತ್ತಿರ ಜಾನುವಾರುಗಳ ಕಳ್ಳತನ ಪ್ರಕರಣ ನಡೆದಿದ್ದು, ಈ ಕುರಿತು ಸರ್ಕಾರದ ತರ್ಫೆ ಪಿಎಸ್‌ಐ ಈರಪ್ಪ ರಿತ್ತಿ ಶಿರಹಟ್ಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.



ಈ ಸಂದರ್ಭದಲ್ಲಿ 1 ಆಕಳು, 3 ಸಣ್ಣ ಕೋಣಗಳು, 5 ಹೋರಿಕರು ಸೇರಿದಂತೆ 10 ಜಾನುವಾರುಗಳನ್ನು ಎಲ್ಲಿಂದಲೋ ಕಳ್ಳತನ ಮಾಡಿಕೊಂಡು ಗೂಡ್ಸ್ ವಾಹನದಲ್ಲಿ ಜಾನುವಾರುಗಳಿಗೆ ಹಿಂಸೆ ನೀಡುವ ರೀತಿಯಲ್ಲಿ ಹಗ್ಗದಿಂದ ಕಟ್ಟಿ ಸೂಕ್ತ ಜಾಗ ಇಲ್ಲದಿದ್ದರೂ ಸಹ ಇಕ್ಕಟ್ಟಾಗಿ ಅವುಗಳನ್ನು ನಿಲ್ಲಿಸಿ ಅವುಗಳಿಗೆ ಆಹಾರ, ನೀರಿನ ವ್ಯವಸ್ಥೆ ಮಾಡದೇ ಉಪವಾಸ ಇಟ್ಟು ಹಿಂಸಾತ್ಮಕ ರೀತಿಯಲ್ಲಿ ಸಾಗಾಟ ಮಾಡಿಕೊಂಡು ಹೋಗುತ್ತಿರುವಾಗ ಪ್ರಿವೆನ್ಸನ್ ಆಫ್ ಕ್ರೂಯಾಲಿಟಿ ಟು ಎನಿಮಲ್ ಆ್ಯಕ್ಟ್-1960ನೇದ್ದರ ಅಡಿಯಲ್ಲಿ ಪಿಎಸ್‌ಐ ಈರಪ್ಪ ರಿತ್ತಿ ಸರ್ಕಾರಿ ತರ್ಫೆ ದೂರು ನೀಡಿ ಪ್ರಕರಣ ದಾಖಲಿಸಿದ್ದು, ಇಬ್ಬರು ಆರೋಪಿತರನ್ನು ನ್ಯಾಯಾಂಗಕ್ಕೆ ಒಪ್ಪಿಸಲಾಗಿದೆ. ಪಿಎಸ್‌ಐ (ಅವಿ) ಎಸ್.ಟಿ. ಕಡಬಿನ ತನಿಖೆ ಕೈಗೊಂಡಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka